ತುಂಗ ಬಿಂಬ
ಸತ್ಯ ಮತ್ತು ಧೈರ್ಯದ ಧ್ವನಿ
TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923
ಸಂಪುಟ: 04 Vol: | ಸಂಚಿಕೆ: 70 Issue: | ರಾಯಚೂರು Raichur | 02-09-2026 | ಬುಧವಾರ Wednesday | ಪುಟ: 04 Page: | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685

ಅಫ್ಘಾನ್ ವಿರುದ್ಧದ T20 ಸರಣಿಗೆ ಭಾರತ ತಂಡ ಪ್ರಕಟ; ವೈಭವ್ ಸೂರ್ಯವಂಶಿಗೆ ಸ್ಥಾನ; ಬುಮ್ರಾ, ರಾಣಾ ಕಮ್ ಬ್ಯಾಕ್!



# ಕಾಂಗ್ರೆಸ್ ಸರ್ಕಾರ ತೊಲಗುವವರೆಗೆ ಬಿಜೆಪಿ ಹೋರಾಟ ನಿಲ್ಲದು: ಬಿ.ವೈ. ವಿಜಯೇಂದ್ರ

ಲಿಂಗಸುಗೂರು: ರಾಜ್ಯದ ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದ್ದು, ಈ ಸರ್ಕಾರ ಅಧಿಕಾರದಿಂದ ತೊಲಗುವವರೆಗೆ ಬಿಜೆಪಿ ಹೋರಾಟ ನಿಲ್ಲಿಸುವುದಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಕಾಂಗ್ರೆಸ್ ಸರ್ಕಾರದ ವೈಫಲ್ಯ ಹಾಗೂ ಭ್ರಷ್ಟಾಚಾರದ ವಿರುದ್ಧ ಹಮ್ಮಿಕೊಂಡಿರುವ ಬಳ್ಳಾರಿ ಚಲೋ ಪಾದಯಾತ್ರೆಯ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಯೊಂದಿಗೆ ಬಿಜೆಪಿ ಹೋರಾಟ ಮುಕ್ತಾಯವಾಗಲಿದೆ ಎಂದು ಕಾಂಗ್ರೆಸ್ ಭಾವಿಸಿತ್ತು. ಆದರೆ ರಾಜ್ಯ ಸರ್ಕಾರ ಅಧಿಕಾರದಿಂದ ಕೆಳಗಿಳಿಯುವವರೆಗೆ ಹೋರಾಟ ಮುಂದುವರಿಯಲಿದೆ ಎಂದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ದುರ್ಬಳಕೆಯಾಗಿದೆ ಎನ್ನಲಾದ ಸಂಪೂರ್ಣ ಹಣ ನಿಗಮಕ್ಕೆ ಮರಳಬೇಕು. ಎಸ್‌ಸಿಪಿ/ಟಿಎಸ್‌ಪಿ ಅನುದಾನವನ್ನು ದಲಿತರ ಕಲ್ಯಾಣಕ್ಕೆ ಬಳಸಬೇಕು. ರಾಜ್ಯದಲ್ಲಿ ದಲಿತರ ಮೇಲಿನ ದೌರ್ಜನ್ಯಗಳಿಗೆ ನ್ಯಾಯ ದೊರೆಯಬೇಕು ಹಾಗೂ ಅನ್ನದಾತರ ಸಮಸ್ಯೆಗಳಿಗೆ ಪರಿಹಾರ ಸಿಗಬೇಕು. ಅಲ್ಲಿಯವರೆಗೆ ಬಿಜೆಪಿ ನಿರಂತರ ಹೋರಾಟ ನಡೆಸಲಿದೆ ಎಂದು ಹೇಳಿದರು.

ಸಚಿವ ನಾಗೇಂದ್ರ ರಾಜೀನಾಮೆ ನೀಡಿದ ಬಳಿಕವೂ ಬಿಜೆಪಿ ಏಕೆ ಪಾದಯಾತ್ರೆ ನಡೆಸುತ್ತಿದೆ ಎಂದು ಡಿ.ಕೆ. ಶಿವಕುಮಾರ್ ಪ್ರಶ್ನಿಸಿದ್ದಾರೆ. ಆದರೆ ಕಾಂಗ್ರೆಸ್ ಸರ್ಕಾರ ಬಡವರು, ದಲಿತರು, ಯುವಕರು ಹಾಗೂ ಮಹಿಳೆಯರ ವಿರೋಧಿಯಾಗಿ ನಡೆದುಕೊಳ್ಳುತ್ತಿದೆ. ಸರ್ಕಾರದ ವಿರುದ್ಧ ಜನಜಾಗೃತಿ ಮೂಡಿಸುವ ಉದ್ದೇಶದಿಂದ ಪಾದಯಾತ್ರೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.



ವಾಲ್ಮೀಕಿ ನಿಗಮದ ಹಗರಣದ ವಿರುದ್ಧ ಬಿಜೆಪಿ ಜಿಲ್ಲಾ ಕೇಂದ್ರಗಳಲ್ಲಿ ಆಹೋರಾತ್ರಿ ಧರಣಿ ನಡೆಸಿತ್ತು. ಹೋರಾಟದ ಒತ್ತಡದಿಂದಲೇ ನಾಗೇಂದ್ರ ಅವರ ರಾಜೀನಾಮೆ ಪಡೆಯಲಾಗಿದೆ. ಇದು ಬಿಜೆಪಿಯ ಹೋರಾಟಕ್ಕೆ ದೊರೆತ ಮೊದಲ ಜಯವಾಗಿದೆ. ಈ ಹೋರಾಟಕ್ಕೆ ಜೆಡಿಎಸ್ ಕೂಡ ಬೆಂಬಲ ನೀಡಿದೆ ಎಂದು ವಿಜಯೇಂದ್ರ ಹೇಳಿದರು.

ವಿಧಾನಮಂಡಲ ಅಧಿವೇಶನದಲ್ಲಿ ಬಿಜೆಪಿ ಆಹೋರಾತ್ರಿ ಧರಣಿ ನಡೆಸುವುದಾಗಿ ಘೋಷಿಸಿದ ಬೆನ್ನಲ್ಲೇ ನಾಗೇಂದ್ರ ಅವರ ರಾಜೀನಾಮೆ ಪಡೆಯಲಾಯಿತು. ಈ ವಿಷಯದಲ್ಲಿ ಸರ್ಕಾರ ಸದನದಲ್ಲಿ ಸಮರ್ಪಕ ಉತ್ತರ ನೀಡದೆ ನುಣುಚಿಕೊಂಡಿದೆ ಎಂದು ಅವರು ಟೀಕಿಸಿದರು.

ದಲಿತರ ಪರ ಸರ್ಕಾರ ಎಂದು ಹೇಳಿಕೊಳ್ಳುವ ಕಾಂಗ್ರೆಸ್, ದಲಿತರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನು ಬೇರೆ ಉದ್ದೇಶಗಳಿಗೆ ಬಳಸಿದೆ. ಇದನ್ನು ಪ್ರಶ್ನಿಸಿದ ಬಿಜೆಪಿಯನ್ನು ದಲಿತ ವಿರೋಧಿ ಎಂದು ಬಿಂಬಿಸುವ ಪ್ರಯತ್ನ ನಡೆಯುತ್ತಿದೆ. ಇಂತಹ ರಾಜಕೀಯ ನಾಟಕವನ್ನು ರಾಜ್ಯದ ಜನರು ಒಪ್ಪುವುದಿಲ್ಲ ಎಂದು ಹೇಳಿದರು.



ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋಟಿ ರೂ. ಹಗರಣ ನಡೆದಿದೆ ಎಂದು ಆರೋಪಿಸಿ, ಈ ಪ್ರಕರಣದ ಹಿನ್ನೆಲೆಯಲ್ಲಿ ರಾಜೀನಾಮೆ ನೀಡಿದ್ದ ಬಿ. ನಾಗೇಂದ್ರ ಅವರನ್ನು ಮತ್ತೆ ಸಚಿವರನ್ನಾಗಿ ಮಾಡಿರುವುದೇಕೆ ಎಂದು ವಿಜಯೇಂದ್ರ ಪ್ರಶ್ನಿಸಿದರು.

ಕೆ.ಎನ್. ರಾಜಣ್ಣ ಅವರ ರಾಜೀನಾಮೆ ಪಡೆದ ಸಂದರ್ಭದಲ್ಲಿ ದಲಿತರ ಬಗ್ಗೆ ಕಾಳಜಿ ತೋರದ ಕಾಂಗ್ರೆಸ್ ಈಗ ದಲಿತರ ಪರ ಎಂದು ಹೇಳಿಕೊಳ್ಳುತ್ತಿದೆ. ನಾಗೇಂದ್ರ ಅವರ ರಾಜೀನಾಮೆಯ ನಂತರ ಬಿಜೆಪಿ ಹೋರಾಟ ಕೈಬಿಡಲಿದೆಎಂಬನಿರೀಕ್ಷೆಕಾಂಗ್ರೆಸ್‌ಗೆಇತ್ತು.ಆದರೆವಾಲ್ಮೀಕಿ ನಿಗಮದ ಹಣ ಸಂಪೂರ್ಣವಾಗಿ ಮರಳಿ ಬಂದು ದಲಿತರ ಕಲ್ಯಾಣ ಯೋಜನೆಗಳಿಗೆ ಸದ್ವಿನಿಯೋಗವಾಗುವವರೆಗೆ ಹೋರಾಟ ಮುಂದುವರಿಯಲಿದೆ ಎಂದರು.

ಹಿಂದಿನ ಬಸವರಾಜ ಬೊಮ್ಮಾಯಿ ಸರ್ಕಾರದ ಅವಧಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲೆಮಾರಿ ಸಮುದಾಯಗಳಿಗೆ ಸಂಬಂಧಿಸಿದಂತೆ ಕೈಗೊಂಡ ಮೀಸಲಾತಿ ಕ್ರಮಗಳನ್ನು ಕಾಂಗ್ರೆಸ್ ಸರ್ಕಾರ ಸಮರ್ಪಕವಾಗಿ ಅನುಷ್ಠಾನಗೊಳಿಸಿಲ್ಲ ಎಂದು ವಿಜಯೇಂದ್ರ ಆರೋಪಿಸಿದರು.

ದಲಿತರ ಕಲ್ಯಾಣಕ್ಕಾಗಿ ಮೀಸಲಾದ ಎಸ್‌ಸಿಪಿ/ಟಿಎಸ್‌ಪಿ ಅನುದಾನದಲ್ಲಿ ಸುಮಾರು 50 ಸಾವಿರ ಕೋಟಿ ರೂ.ಗಳನ್ನು ಬೇರೆ ಉದ್ದೇಶಗಳಿಗೆ ವರ್ಗಾಯಿಸಲಾಗಿದೆ ಎಂದು ಆರೋಪಿಸಿದ ಅವರು, ಈ ಹಣವನ್ನು ಮತ್ತೆ ದಲಿತರ ಕಲ್ಯಾಣ ಕಾರ್ಯಕ್ರಮಗಳಿಗೆ ಒದಗಿಸುವವರೆಗೆ ಬಿಜೆಪಿ ಹೋರಾಟ ನಡೆಸಲಿದೆ ಎಂದು ಹೇಳಿದರು.

ರಾಜ್ಯದಲ್ಲಿ ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿಯೂ ಸರ್ಕಾರ ಸೂಕ್ತವಾಗಿ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದ ಅವರು, ಕೊಪ್ಪಳದಲ್ಲಿ ವಾಲ್ಮೀಕಿ ಸಮುದಾಯದ ಯುವಕ ಗವಿಸಿದ್ದಪ್ಪ ಅವರ ಹತ್ಯೆ ಪ್ರಕರಣವನ್ನು ಉಲ್ಲೇಖಿಸಿದರು. ವಾಲ್ಮೀಕಿ ನಿಗಮದ ಪ್ರಕರಣಕ್ಕೆ ಸಂಬಂಧಿಸಿದಂತೆ ಅಧಿಕಾರಿ ಚಂದ್ರಶೇಖರ್ ಆತ್ಮಹತ್ಯೆ ಮಾಡಿಕೊಂಡಾಗ ಅವರ ಕುಟುಂಬಕ್ಕೆ ಸಮರ್ಪಕ ನ್ಯಾಯ ಮತ್ತು ನೆರವು ಒದಗಿಸಲಿಲ್ಲ ಎಂದೂ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಮಾಜಿ ಮುಖ್ಯಮಂತ್ರಿಗಳಾದ ಜಗದೀಶ್ ಶೆಟ್ಟರ್, ಬಸವರಾಜ ಬೊಮ್ಮಾಯಿ, ಬಿಜೆಪಿ ರಾಷ್ಟ್ರೀಯ ಉಪಾಧ್ಯಕ್ಷ ಹಾಗೂ ರಾಜ್ಯಸಭಾ ಸದಸ್ಯ ಎಂ. ನಾಗರಾಜ, ಕರ್ನಾಟಕ ರಾಜ್ಯ ಸಹ ಉಸ್ತುವಾರಿ ಪಿ. ಸುಧಾಕರ್ ರೆಡ್ಡಿ, ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ, ಮಾಜಿ ಸಚಿವ ಬಿ. ಶ್ರೀರಾಮುಲು, ಶಾಸಕರಾದ ಗಾಲಿ ಜನಾರ್ದನ ರೆಡ್ಡಿ, ಮಾನಪ್ಪ ವಜ್ಜಲ್, ಡಾ. ಎಸ್. ಶಿವರಾಜ್ ಪಾಟೀಲ್, ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜುಗೌಡ ನಾಯಕ, ಮಾಜಿ ಸಚಿವ ಶಿವನಗೌಡ ನಾಯಕ ಸೇರಿದಂತೆ ಪಕ್ಷದ ಕೋರ್ ಕಮಿಟಿ ಸದಸ್ಯರು, ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ರಾಜ್ಯ ಪದಾಧಿಕಾರಿಗಳು, ಜಿಲ್ಲಾಧ್ಯಕ್ಷರು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಉಪಸ್ಥಿತರಿದ್ದರು.

ವಿವಿಧ ಆಯಾಮಗಳಲ್ಲಿ, ವಿವಿಧ ವಿಷಯಗಳನ್ನು ಮುಂದಿಟ್ಟು ಹೋರಾಟದ ದಿನಗಳು ಇಡೀ ಕರ್ನಾಟದಲ್ಲಿ ಮುಂದೆ ಇವೆ. ಇದಕ್ಕಾಗಿ ನಾವೆಲ್ಲ ಸಿದ್ಧರಾಗೋಣ. ಕರ್ನಾಟಕದ ಜನತೆಯ ಪರವಾಗಿ ನಾವು ಹೆಜ್ಜೆಗೆ ಹೆಜ್ಜೆ ಇಟ್ಟು ಕೆಲಸ ಮಾಡುತ್ತೇವೆ. ನಿಮ್ಮ ಧ್ವನಿಯಾಗಿ ಕೆಲಸ ಮಾಡುತ್ತೇವೆ. ದಯವಿಟ್ಟು ನಮಗೆ ಹೆಗಲಿಗೆ ಹೆಗಲು ಕೊಡಿ.
**-ಬಸವರಾಜ ಬೊಮ್ಮಾಯಿ, ಮಾಜಿ ಮುಖ್ಯಮಂತ್ರಿ**

ರಾಜ್ಯದ ಡಿ.ಕೆ.ಶಿವಕುಮಾರ್ ಸರಕಾರಕ್ಕೆ ಎಚ್ಚರಿಕೆ ನೀಡುವುದಕ್ಕಾಗಿ ಬಿಜೆಪಿ ಈ ಪಾದಯಾತ್ರೆಯನ್ನು ನಡೆಸುತ್ತಿದೆ. ಬಿಜೆಪಿ ತೀವ್ರ ಹೋರಾಟದ ಪರಿಣಾಮವಾಗಿ ನಾಗೇಂದ್ರ ರಾಜೀನಾಮೆ ಕೊಟ್ಟಿದ್ದು, ಹೋರಾಟ ಮಾಡಿದ ನಾಯಕರೆಲ್ಲರಿಗೂ ಅಭಿನಂದನೆಗಳು. ಕಾಂಗ್ರೆಸ್ ಸಚಿವಸಂಪುಟದಲ್ಲಿ ಡಿಕೆಶಿ ಗುಂಪು, ಸಿದ್ದರಾಮಯ್ಯರ ಗುಂಪು, ಇನ್ನೊಂದು ಹೈಕಮಾಂಡ್ ಗುಂಪುಗಳಿವೆ. ದೇಣಿಗೆ ಕೊಟ್ಟವರೇ ಸಿಎಂ, ಸಚಿವರಾಗಿದ್ದಾರೆ.
**-ಜಗದೀಶ ಶೆಟ್ಟರ್ ಮಾಜಿ ಮುಖ್ಯಮಂತ್ರಿ**

ಸಿದ್ದರಾಮಯ್ಯನವರ ಸರಕಾರದಲ್ಲಿ ದರೋಡೆ ಮಾಡುತ್ತಿದ್ದರು. ಈಗ ಡಿ.ಕೆ.ಶಿವಕುಮಾರ್ ಸರಕಾರದಲ್ಲಿ ತೆರಿಗೆ ಹೆಚ್ಚಳದ ಮೂಲಕ ಪಿಕ್ ಪಾಕೆಟ್ ಮಾಡುತ್ತಿದ್ದಾರೆ. 175 ತಾಲ್ಲೂಕುಗಳಲ್ಲಿ ಬರಗಾಲವಿದ್ದರೂ 101 ತಾಲ್ಲೂಕುಗಳನ್ನು ಮಾತ್ರ ಈ ಸರಕಾರ ಬರಪೀಡಿತ ಎಂದು ಪ್ರಕಟಿಸಿದೆ. ಈ ಸರಕಾರದ ಬಳಿ ಹಣ ಇಲ್ಲ. ಉಳಿದ ತಾಲ್ಲೂಕುಗಳನ್ನು ಘೋಷಿಸಿ; ಇಲ್ಲವಾದರೆ ನಿಮ್ಮ ಸರಕಾರ ಪಾಪರ್ ಎಂದು ಜನರೇ ಘೋಷಿಸುತ್ತಾರೆ.
**-ಆರ್.ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ**

ಜನರಿಗಾಗಿ ಜನಪರವಾದ 10 ದಿನಗಳ ಪಾದಯಾತ್ರೆ ಇದು. ರಾಜ್ಯದಲ್ಲಿ ಭ್ರಷ್ಟ ಸರಕಾರದ ವಿಚಾರಗಳನ್ನು ಜನಮನಕ್ಕೆ ಮುಟ್ಟಿಸಲು ಬಿಜೆಪಿ ಈ ಪಾದಯಾತ್ರೆ ಹಮ್ಮಿಕೊಂಡಿದೆ. ಕಾಂಗ್ರೆಸ್ ಸರಕಾರ ಮಹಿಳಾ ವಿರೋಧಿ, ದಲಿತ ವಿರೋಧಿ, ಯುವಜನರ ವಿರೋಧಿ, ರೈತವಿರೋಧಿ. ಈ ಸರಕಾರ ಶೌಚಾಲಯಗಳನ್ನೂ ಕಟ್ಟಿಸಿಕೊಟ್ಟಿಲ್ಲ. ಕಾಂಗ್ರೆಸ್ ಸರಕಾರವು ಕೇಂದ್ರದಿಂದ ಬಂದ ಹಣವನ್ನೂ ಲೂಟಿ ಮಾಡಿ ನುಂಗಿದೆ.
**-ಛಲವಾದಿ ನಾರಾಯಣಸ್ವಾಮಿ, ವಿಧಾನಪರಿಷತ್ ವಿಪಕ್ಷ ನಾಯಕ**

ಕಾಂಗ್ರೆಸ್ ಸರಕಾರವು ಮಾಡಿರುವ ದುರಾಡಳಿತದ ವಿರುದ್ಧ ಹೋರಾಟ ನಮ್ಮದು. 53 ಸಾವಿರ ಕೋಟಿಗೂ ಹೆಚ್ಚು ಮೊತ್ತದ ದಲಿತರ ಹಣವನ್ನು ಅನ್ಯ ಉದ್ದೇಶಕ್ಕೆ ದುರುಪಯೋಗ ಮಾಡಿಕೊಂಡಿದ್ದಾರೆ. ವಾಲ್ಮೀಕಿ ನಿಗಮದ ಹಣ ವಾಪಸ್ ಖಜಾನೆಗೆ ಬರಬೇಕಿದೆ. ಮೀಸಲಾತಿ ಪ್ರಮಾಣ ಹೆಚ್ಚಿಸಬೇಕಿದೆ.
**-ಗೋವಿಂದ ಕಾರಜೋಳ, ಮಾಜಿ ಡಿಸಿಎಂ, ಸಂಸದ**

ಅರಮನೆಯಲ್ಲಿ ಕುಳಿತು ಆಡಳಿತ ಮಾಡುವ ಸರಕಾರ ಇದು. ಜನರನ್ನು ಬೀದಿಯಲ್ಲಿ ನಿಲ್ಲಿಸುವ ಕೆಲಸವನ್ನು ಈ ಸರಕಾರ ಮಾಡಿದೆ. ಭ್ರಷ್ಟಾಚಾರ ಮಿತಿಮೀರಿದೆ. ಕಾನೂನು- ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ. ಬರಗಾಲ ತೀವ್ರವಾಗಿ ರೈತರು ಗುಳೆ ಹೋಗುತ್ತಿದ್ದು, ಸರಕಾರ ಸ್ಪಂದಿಸುತ್ತಿಲ್ಲ.
**-ಬಿ.ಶ್ರೀರಾಮುಲು, ಮಾಜಿ ಸಚಿವ**

ಜನಹಿತಕ್ಕಾಗಿ ಈ ಹೋರಾಟ. ಒಂದು ಕಡೆ ಬರದಿಂದ ಕಂಗೆಟ್ಟ ಜನರಿದ್ದರೆ, ಬರಗೆಟ್ಟ ಕಾಂಗ್ರೆಸ್ ಇನ್ನೊಂದು ಕಡೆ ಇದೆ. ಉಪ್ಪು ತಿಂದವ ನೀರು ಕುಡಿಯುವಂತೆ ನಾಗೇಂದ್ರ ರಾಜೀನಾಮೆ ಕೊಟ್ಟಿದ್ದಾರೆ. ವಾಲ್ಮೀಕಿ ನಿಗಮದಿಂದ ಲೂಟಿ ಆದ ಹಣ ಖಜಾನೆಗೆ ಬಂದಿಲ್ಲ. ಎಲ್ಲ ಅಗತ್ಯ ವಸ್ತುಗಳ ಬೆಲೆ ಏರಿಸಿದ್ದಾರೆ. ರೈತರು, ಜನತೆ ಸಂಕಷ್ಟದಲ್ಲಿದ್ದಾರೆ.
**-ಸಿ.ಟಿ.ರವಿ, ಮಾಜಿ ಸಚಿವ**

ಕುರಿ ಕಾಯಲು ತೋಳನನ್ನು ನೇಮಿಸಿದಂತಿದೆ ಈ ಸರಕಾರ. ಬೇಲಿ ಎದ್ದು ಹೊಲ ಮೇಯುವ ಪರಿಸ್ಥಿತಿ ಇದೆ. ಇನ್ನೆಂಥ ಆಡಳಿತ ನೋಡಲು ಸಾಧ್ಯ?
**-ವಿರೂಪಾಕ್ಷಪ್ಪ, ಮಾಜಿ ಸಂಸದ**

ಲಿಂಗಸುಗೂರಿನಿಂದ ಪಕ್ಷದ ಪಾದಯಾತ್ರೆ ನಡೆಯುತ್ತಿರುವುದು ಶುಭ ಸೂಚನೆ. ನಾಗೇಂದ್ರ ರಾಜೀನಾಮೆ ಎಂಬುದು ಬಿಜೆಪಿಗೆ ಕೇವಲ ಅಣು ಮಾತ್ರ. ಇಲ್ಲಿನ ನವಲಿ ಜಲಾಶಯ ನಿರ್ಮಾಣ ಆಗಬೇಕು. ಇದಕ್ಕಾಗಿ 20 ಸಾವಿರ ಕೋಟಿ ಹಣವನ್ನು ಮೀಸಲಿಡಿ. 2028ರಲ್ಲಿ ಬಿಜೆಪಿ ಸರಕಾರ ಆಡಳಿತಕ್ಕೆ ಬರಲಿದೆ.
**-ಜನಾರ್ದನ ರೆಡ್ಡಿ, ಮಾಜಿ ಸಚಿವ**

ಮಳೆ ಇಲ್ಲದೇ ಬರಗಾಲ ಈ ಭಾಗವನ್ನು ತೀವ್ರವಾಗಿ ಕಾಡುತ್ತಿದೆ. ಆದರೂ ಈ ಸರಕಾರ ಕಣ್ತೆರೆದಿಲ್ಲ. ಬರ ಘೋಷಣೆಯಲ್ಲಿ ವಿಫಲವಾಗಿದೆ.
**-ಶಶೀಲ್ ನಮೋಶಿ, ವಿಧಾನಪರಿಷತ್ ಅಭ್ಯರ್ಥಿ**

ಪಾದಯಾತ್ರೆಯು ಲಿಂಗಸುಗೂರಿನಿಂದ ಬಳ್ಳಾರಿಗೆ ತೆರಳಲಿದೆ. ಅವ್ಯವಹಾರಗಳು, ಹಗರಣಗಳು ಸೇರಿ ಕಾಂಗ್ರೆಸ್ ಸರಕಾರದ ವೈಫಲ್ಯಗಳನ್ನು ಜನರ ಮುಂದಿಡುವುದೇ ಇದರ ಉದ್ದೇಶ.
**-ಮಾನಪ್ಪ ವಜ್ಜಲ್, ಶಾಸಕ**

## ನಕಲಿ ವೈದ್ಯರ ಕ್ಲಿನಿಕ್‌ಗಳ ಮೇಲೆ ಏಕಕಾಲಕ್ಕೆ ದಾಳಿ

### ಜಿಲ್ಲೆಯ 7 ಕ್ಲಿನಿಕ್‌ಗಳ ವಿರುದ್ಧ ಶಿಸ್ತು ಕ್ರಮಕ್ಕೆ ಜಿಲ್ಲಾಧಿಕಾರಿಗಳಿಗೆ ಡಿಹೆಚ್‌ಓ ಡಾ.ನಂದಿತಾ ಎಮ್.ಎನ್. ಶಿಫಾರಸ್ಸು




ರಾಯಚೂರು ಸೆಪ್ಟಂಬರ್ 01 (ಕರ್ನಾಟಕ ವಾರ್ತೆ): ಜಿಲ್ಲೆಯಲ್ಲಿ ಅಧಿಕೃತ ವೈದ್ಯ ಪದವಿ ಪಡೆಯದೆ ವೈದ್ಯ ವೃತ್ತಿ ಮಾಡುತ್ತಿದ್ದ ನಕಲಿ ವೈದ್ಯರ ಕ್ಲಿನಿಕ್‌ಗಳ ಮೇಲೆ ಜಿಲ್ಲೆಯಾದ್ಯಂತ ಏಕಕಾಲಕ್ಕೆ ದಾಳಿ ಮಾಡಿ 07 ನಕಲಿ ವೈದ್ಯರ ಕ್ಲಿನಿಕ್‌ಗಳ ವಿರುದ್ಧ ಶಿಸ್ತು ಕ್ರಮಕ್ಕೆ ಜಿಲ್ಲಾಧಿಕಾರಿಗಳಿಗೆ ಶಿಫಾರಸ್ಸು ಮಾಡಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನಂದಿತಾ ಎಮ್.ಎನ್. ಅವರು ತಿಳಿಸಿದ್ದಾರೆ.

ಜನರ ಜೀವಕ್ಕೆ ಅಪಾಯವೊಡ್ಡುವ ನಕಲಿ ವೈದ್ಯರು ಸಾಮಾನ್ಯವಾಗಿ ಪ್ರಾಥಮಿಕ ಅಥವಾ ಪ್ರೌಢ ಶಿಕ್ಷಣಕ್ಕೆ ವಿದ್ಯಾಬ್ಯಾಸ ನಿಲ್ಲಿಸಿ ಅಥವಾ ಮಧ್ಯದಲ್ಲಿ ಶಾಲೆ ಬಿಟ್ಟವರಾಗಿದ್ದು, ಈ ಹಿನ್ನೆಲೆ ಜನತೆಗೆ ತಾವು ವೈದ್ಯರಂತೆ ಬಿಂಬಿಸಿ ಮೋಸ ಮಾಡುವ ವ್ಯಕ್ತಿಗಳ ವಿರುದ್ದ ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಕಂದಾಯ ಇಲಾಖೆ, ಪಂಚಾಯತ್ ರಾಜ್ ಇಲಾಖೆ, ಪೋಲಿಸ್ ಇಲಾಖೆ, ಜಿಲ್ಲಾ ಆಯುಷ್ ಇಲಾಖೆ ಹಾಗೂ ಔಷಧಿ ನಿಯಂತ್ರಣ ಇಲಾಖೆ, ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗಳ ತಾಲೂಕಾವಾರು ತಂಡಗಳನ್ನು ಜಂಟಿಯಾಗಿ ರಚಿಸಿ ದಾಳಿ ಮಾಡಲಾಗಿದ್ದು, ದಾಳಿ ವೇಳೆ ವೈದ್ಯ ವೃತ್ತಿ ಮಾಡಬೇಕಾಗುವ ನೋಂದಣಿ ಪತ್ರಗಳು ಇಲ್ಲದ ಹಿನ್ನಲೆಯಲ್ಲಿ ಅವರ ಕ್ಲಿನಿಕ್ ಸೀಜ್ ಮಾಡಿ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡಲಾಗಿದೆ ಎಂದರು.

07 ಕ್ಲಿನಿಕ್‌ಗಳು ಶಿಸ್ತು ಕ್ರಮ: ರಾಯಚೂರು ತಾಲೂಕಿನ ಇಡಪನೂರು ಗ್ರಾಮದ ಖಾಜಾ ಪಟೇಲ್ ಕ್ಲಿನಿಕ್ ಮತ್ತು ಯರಗೇರಾ ಗ್ರಾಮದ ಆನಂದ್ ಕ್ಲಿನಿಕ್, ಮಾನವಿ ತಾಲೂಕಿನ ಮಲ್ಲಟ ಗ್ರಾಮದ ವೆಂಕಟೇಶ ಕ್ಲಿನಿಕ್ ಮತ್ತು ಬಾಗಲವಾಡ ಗ್ರಾಮದ ವಿಶ್ವನಾಥ್ ಕ್ಲಿನಿಕ್, ಲಿಂಗಸುಗೂರ ತಾಲೂಕಿನ ಭೂಪೂರು ಗ್ರಾಮದ ಚಿದಾನಂದ್ ಕ್ಲಿನಿಕ್ ಹಾಗೂ ದೇವದುರ್ಗ ತಾಲೂಕಿನ ಜಾಲಹಳ್ಳಿಯ ಶ್ರೀ ವಿದ್ಯಾ ಕ್ಲಿನಿಕ್ ಮತ್ತು ಬಾಬು ಕ್ಲಿನಿಕ್‌ಗಳ ಮೇಲೆ ದಾಳಿ ಮಾಡಲಾಗಿದ್ದು, ಜಿಲ್ಲೆಯಲ್ಲಿ ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ,

2ನೇ ಪುಟಕ್ಕೆ

## ಅರ್ಹ ಫಲಾನುಭವಿಗಳಿಗೆ ಸರಿಯಾಗಿ ಹಣ ಜಮೆಯಾಗಲಿ: ಪಾಮಯ್ಯ ಮುರಾರಿ



ರಾಯಚೂರು ಸೆಪ್ಟಂಬರ್ 01 (ಕರ್ನಾಟಕ ವಾರ್ತೆ): ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳನ್ನು ಮರುಪರಿಶೀಲನೆ ಮಾಡಿ, ಅನರ್ಹ ಫಲಾನುಭವಿಗಳನ್ನು ಕೈಬಿಟ್ಟು ಅರ್ಹ ಫಲಾನುಭವಿಗಳಿಗೆ ಸರಿಯಾದ ರೀತಿಯಲ್ಲಿ ಹಣ ಜಮೆ ಮಾಡಲು ಅಗತ್ಯ ಕ್ರಮ ವಹಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಸಂಬಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸೆಪ್ಟಂಬರ್ 01ರ ಮಂಗಳವಾರ ನಗರದ ಜಿಲ್ಲಾ ಪಂಚಾಯತ್ ಜಲ ನಿರ್ಮಲ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗೃಹಲಕ್ಷ್ಮಿ ಸೇರಿದಂತೆ ರಾಜ್ಯ ಸರ್ಕಾರದ ಪಂಚಗ್ಯಾರಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಿಸಲು ಸಂಬಧಪಟ್ಟ ಇಲಾಖೆಯ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯ ನಿರ್ವಹಿಸಬೇಕು. ಜಿಲ್ಲೆಯಲ್ಲಿ ಗೃಹಲಕ್ಷ್ಮಿ ಯೋಜನೆಯಡಿ ಈಗಾಗಲೇ ಅರ್ಜಿ ಸಲ್ಲಿಸಿದ ಫಲಾನುಭವಿಗಳ ಪೈಕಿ ಮರಣ ಹೊಂದಿದ ಫಲಾನುಭವಿಗಳ ಪಟ್ಟಿಯನ್ನು ತಯಾರಿಸಿ, ಮರಣ ಹೊಂದಿದ ನಂತರವೂ ಫಲಾನುಭವಿಯ ಕುಟುಂಬದವರು ಯೋಜನೆಯ ಸೌಲಭ್ಯ ಪಡೆಯುತ್ತಿದ್ದರೆ ಅಂತಹ ಹಣವನ್ನು ಸರ್ಕಾರಕ್ಕೆ ಮರಳಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಆ.30ರಿಂದ ಗೃಹಲಕ್ಷ್ಮಿ ಯೋಜನೆಯ ಮರುಪರಿಶೀಲನಾ ಪ್ರಕ್ರಿಯೆ ನಡೆದಿದ್ದು, ಸೆಪ್ಟೆಂಬರ್ ಕೊನೆಯ ವರೆಗೆ ನಡೆಯಲಿದೆ. ಆದ್ದರಿಂದ ಅಧಿಕಾರಿಗಳಷ್ಟೇ ಅಲ್ಲದೇ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸದಸ್ಯರೂ ಕೂಡ ಅರ್ಹ ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯವನ್ನು ಒದಗಿಸಲು ಶ್ರಮಿಸಬೇಕು ಎಂದರು.

ಗೃಹಲಕ್ಷ್ಮಿ ಯೋಜನೆಗೆ ಸಂಬಧಿಸಿದತೆ ಜಿಲ್ಲೆಯಲ್ಲಿ 7983 ಫಲಾನುಭವಿಗಳು ಮರಣ ಹೊಂದಿದ್ದಾರೆ ಎಂಬ ಮಾಹಿತಿ ಕೇಂದ್ರ ಕಚೇರಿಯಿಂದ ಬಂದಿದ್ದು, ಮರಣ ಹೊಂದಿದ ನಂತರವೂ 3219 ಫಲಾನುಭವಿಗಳ ಕುಟುಂಬದವರು ಸಹಾಯಧನ ಪಡೆಯುತ್ತಿದ್ದಾರೆ. 3.39 ಕೋಟಿ ರೂ.ಗೂ ಅಧಿಕ ಹಣ ಬ್ಯಾಂಕ್‌ಗಳಿದ ಮರು ಪಾವತಿಸಬೇಕಿದ್ದು, ಈಗಾಗಲೇ ಡಿಡಿ ಕಚೇರಿ, ಬ್ಯಾಂಕ್ ಮತ್ತು ಅಂಚೆ ಕಚೇರಿಗಳಿಂದ ಸರ್ಕಾರಕ್ಕೆ 79.99 ಲಕ್ಷ ರೂ. ಮರುಪಾವತಿ ಮಾಡಲಾಗಿದೆ. ಇದಲ್ಲದೇ ಫಲಾನುಭವಿಗಳು ಮರಣ ಹೊಂದಿದ ನಂತರ

2ನೇ ಪುಟಕ್ಕೆ

## ಕುಮಾರಸ್ವಾಮಿ ಬಳಿ ದಾಖಲೆಗಳಿದ್ದರೆ ಬಹಿರಂಗಪಡಿಸಲಿ: ಎ. ವಸಂತಕುಮಾರ ಸವಾಲು




ರಾಯಚೂರು: ಕರ್ನಾಟಕ ಕಾಂಗ್ರೆಸ್ ಸರ್ಕಾರದ ವಿರುದ್ಧ ಭ್ರಷ್ಟಾಚಾರಕ್ಕೆ ಸಂಬಂಧಿಸಿದ ದಾಖಲೆಗಳು ತಮ್ಮ ಬಳಿ ಇದ್ದರೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಅವುಗಳನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಗುಪ್ತವಾಗಿ ಸಲ್ಲಿಸುವ ಬದಲು ಸಾರ್ವಜನಿಕರ ಮುಂದೆ ಬಹಿರಂಗಪಡಿಸಲಿ. ದಾಖಲೆಗಳೊಂದಿಗೆ ಸುದ್ದಿಗೋಷ್ಠಿ ನಡೆಸಿದರೆ ಕಾಂಗ್ರೆಸ್ ಅದಕ್ಕೆ ಸೂಕ್ತ ಉತ್ತರ ನೀಡಲಿದೆ ಎಂದು ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ ಸವಾಲು ಹಾಕಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನಾ ಹೋರಾಟದ ಸಂದರ್ಭದಲ್ಲಿ ಪತ್ರಕರ್ತರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು ಈ ಹೇಳಿಕೆ ನೀಡಿದರು.

ಅಸ್ಪೃಶ್ಯತೆ ಆಚರಣೆಯನ್ನು ವಿರೋಧಿಸಿ ಧ್ವನಿ ಎತ್ತಿದ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ವಿರುದ್ಧ ದುರುದ್ದೇಶಪೂರಿತವಾಗಿ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಆರೋಪಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ಪ್ರತಿಭಟನೆಯಲ್ಲಿ ಮಾತನಾಡಿದ ಕಾಂಗ್ರೆಸ್ ಮುಖಂಡರು, ಅಸ್ಪೃಶ್ಯತೆ ಹಾಗೂ ಜಾತಿ ತಾರತಮ್ಯಕ್ಕೆ ವಿರುದ್ಧವಾಗಿ ಹೋರಾಟ ನಡೆಸುವುದು ಸಂವಿಧಾನಬದ್ಧ ಹಕ್ಕಾಗಿದೆ. ಇಂತಹ ವಿಚಾರಗಳ ವಿರುದ್ಧ ಧ್ವನಿ ಎತ್ತಿದ ರಾಹುಲ್ ಗಾಂಧಿ ಅವರ ವಿರುದ್ಧ ಪ್ರಕರಣ ದಾಖಲಿಸಿರುವುದು ರಾಜಕೀಯ ಪ್ರೇರಿತ ಕ್ರಮವಾಗಿದೆ ಎಂದು ಆರೋಪಿಸಿದರು.

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಕರ್ನಾಟಕ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರಕ್ಕೆ ಸಂಬಂಧಿಸಿದ ದಾಖಲೆಗಳನ್ನು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಲ್ಲಿಸಿದ್ದಾರೆ ಎನ್ನಲಾದ ವಿಚಾರದ ಕುರಿತು ಪ್ರಶ್ನಿಸಿದಾಗ ಎಂಎಲ್‌ಸಿ ಎ. ವಸಂತಕುಮಾರ ಪ್ರತಿಕ್ರಿಯಿಸಿದರು.

“ಕರ್ನಾಟಕ ಕಾಂಗ್ರೆಸ್ ಸರ್ಕಾರದ ವಿರುದ್ಧ ಭ್ರಷ್ಟಾಚಾರಕ್ಕೆ ಸಂಬಂಧಿಸಿದ ನೈಜ ದಾಖಲೆಗಳು ಕುಮಾರಸ್ವಾಮಿ ಅವರ ಬಳಿ ಇದ್ದರೆ ಅವುಗಳನ್ನು ಗುಪ್ತವಾಗಿ ಯಾರಿಗೋ ನೀಡುವ ಅಗತ್ಯವಿಲ್ಲ. ಸಾರ್ವಜನಿಕರ ಎದುರು ಬಹಿರಂಗವಾಗಿ ಸುದ್ದಿಗೋಷ್ಠಿ ನಡೆಸಿ ದಾಖಲೆಗಳನ್ನು ಬಿಡುಗಡೆ ಮಾಡಲಿ. ಆರೋಪಗಳಿಗೆ ಸಾಕ್ಷ್ಯಾಧಾರಗಳನ್ನು ಮುಂದಿಡಲಿ. ಆಗ ಕಾಂಗ್ರೆಸ್ ಪಕ್ಷವೂ ಪ್ರತಿಯೊಂದು ಆರೋಪಕ್ಕೂ ದಾಖಲೆಗಳ ಸಮೇತ ಉತ್ತರ ನೀಡಲು ಸಿದ್ಧವಾಗಿದೆ’’ ಎಂದು ಹೇಳಿದರು.

ರಾಜಕೀಯದಲ್ಲಿ ಆರೋಪ-ಪ್ರತ್ಯಾರೋಪಗಳು ಸಹಜವಾದರೂ, ಯಾವುದೇ ಆರೋಪಕ್ಕೆ ಸೂಕ್ತ ದಾಖಲೆ ಮತ್ತು ಪುರಾವೆ ಇರಬೇಕು.

2ನೇ ಪುಟಕ್ಕೆ

## ತಾತ್ಕಾಲಿಕವಾಗಿ ಆಯ್ಕೆ ಪಟ್ಟಿ ಪ್ರಕಟ: ಅಕ್ಷೇಪಣೆಗೆ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 01 (ಕರ್ನಾಟಕ ವಾರ್ತೆ): ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಾನವಿ ಶಿಶು ಅಭಿವೃದ್ಧಿ ಯೋಜನೆಯಡಿ 2026-27ನೇ ಸಾಲಿಗೆ ಕಂ ಕ್ರಷ್ ಅಂಗನವಾಡಿ ಕಾರ್ಯಕರ್ತೆ 06 ಮತ್ತು ಕಂ ಕ್ರಷ್ ಸಹಾಯಕಿಯರು 06 ಖಾಲಿ ಹುದ್ದೆಗಳ ನೇಮಕಾತಿ ತಾತ್ಕಾಲಿಕವಾಗಿ ಆಯ್ಕೆ ಪಟ್ಟಿ ಪ್ರಕಟಿಸಲಾಗಿದ್ದು, ಅಕ್ಷೇಪಣೆಗೆ ಅರ್ಜಿ ಆಹ್ವಾನಿಸಲಾಗಿದೆ.

ತಾತ್ಕಾಲಿಕ ಆಯ್ಕೆ ಪಟ್ಟಿಗೆ ಅಕ್ಷೇಪಣೆ ಅರ್ಜಿ ಸಲ್ಲಿಸುವವರು ಸೂಕ್ತ ದಾಖಲಾತಿಗಳೊಂದಿಗೆ ದಿನಾಂಕ: 05-09-2026ರ ಬೆಳಿಗ್ಗೆ 10ಗಂಟೆಯಿದ ಮಧ್ಯಾಹ್ನ 5:30 ರವರೆಗೆ ಸಲ್ಲಿಸಬಹುದಾಗಿದೆ. ಅಕ್ಷೇಪಣೆ ಸಲ್ಲಿಸುವವರು ಅಕ್ಷೇಪಣೆ ಅರ್ಜಿಯ ಜೊತೆಗೆ ಯಾವುದೇ ದಾಖಲಾತಿಗಳು ಸಲ್ಲಿಸದಿದ್ದಲ್ಲಿ ಅಂತಹವರ ಅಕ್ಷೇಪಣೆ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಮಾನವಿರವರನ್ನು ಸಂಪರ್ಕಿಸುವತೆ ಮಾನವಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಂದೀಪನಿ ಶಿಷ್ಯ ವೇತನಕ್ಕೆ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 01 (ಕರ್ನಾಟಕ ವಾರ್ತೆ): ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆಯಲು ಪ್ರೋತ್ಸಾಹಿಸುವ ಉದ್ದೇಶದಿಂದ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಸಾಂದೀಪನಿ ಶಿಷ್ಯ ವೇತನ ಯೋಜನೆಯಡಿ 2026-27ನೇ ಸಾಲಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಮಂಡಳಿಯು ಸಾಂದೀಪನಿ ಶಿಷ್ಯವೇತನ ಯೋಜನೆಯನ್ನು ಜಾರಿಗೆ ತರಲಾಗಿದೆ. ಈ ಯೋಜನೆಯನ್ನು ರಾಜ್ಯ ಇ-ಆಡಳಿತ ಇಲಾಖೆಯ ರಾಜ್ಯ ಶಿಷ್ಯವೇತನ ತಂತ್ರಾಶದ ಮೂಲಕ ಜಾರಿಗೊಳಿಸಲಾಗಿದೆ. ಸಾಂದೀಪನಿ ಶಿಷ್ಯವೇತನದಲ್ಲಿ ಪ್ರಥಮ, ದ್ವಿತೀಯ ಪಿಯು ವಿದ್ಯಾರ್ಥಿಗಳಿಗೆ ಹಾಗೂ ಸಾಮಾನ್ಯ ಪದವಿ ಕೋರ್ಸ್ಗಳನ್ನು ವ್ಯಾಸಂಗ ಮಾಡುತತಿರುವ ಪ್ರತಿ ವಿದ್ಯಾರ್ಥಿಗೆ ವಾರ್ಷಿಕ ನಿರ್ವಹಣಾ ವೆಚ್ಚ ರೂ.15,000/- ದಂತೆ ಶಿಷ್ಯವೇತನ ಹಾಗೂ ಸಿಇಟಿ, ನೀಟ್ ಸೇರಿದಂತೆ ಸಾಮಾನ್ಯ ಪ್ರವೇಶ ಪರೀಕ್ಷೆಗಳ ಮೂಲಕ ಪದವಿ ಮತ್ತು ಸ್ನಾತಕೋತ್ತರ ಪದವಿಗಳಿಗೆ ದಾಖಲಾತಿ ಪಡೆದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಶುಲ್ಕದ 2/3 ಭಾಗದ ಮೊತ್ತವನ್ನು ಮರುಪಾವತಿ ಮಾಡಲಾಗುವುದು.

ಶಿಷ್ಯವೇತನವನ್ನು ಪಡೆಯಲು ಬೇಕಾದ ಅರ್ಹತೆಗಳು ವಿದ್ಯಾರ್ಥಿಗಳು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. ಬ್ರಾಹ್ಮಣ ಸಮುದಾಯದ ಸಾಮಾನ್ಯ ವರ್ಗಕ್ಕೆ ಸೇರಿದೆ ವಿದ್ಯಾರ್ಥಿಗಳು ಚಾಲ್ತಿಯಲ್ಲಿರುವ ಆರ್ತಿಕವಾಗಿ ಹಿಂದುಳಿದ ಪ್ರಮಾಣಪತ್ರ (ಇ ಪ್ರಮಾಣ ಪತ್ರ 8ಲಕ್ಷಆದಾಯ ಮಿತಿ)ಹೊಂದಿರಬೇಕು. ವೃತ್ತಿಪರ ಕೋರ್ಸ್ಗಳಿಗೆ ಮ್ಯಾನೇಜ್ಮೆಂಟ್ ಕೋಟಾ ಅಥವಾ ಕಾಮೆಡ್-ಕೆ ರಿ ಪ್ರವೇಶಾತಿ ಪಡೆದ ವಿದ್ಯಾರ್ತಿಗಳು ಶುಲ್ಕ ಮರುಪಾವತಿಗೆ ಅರ್ಹರಿರುವುದಿಲ್ಲ. ವಿದ್ಯಾರ್ಥಿಗಳ ಆಧಾರ್‌ಗೆ ಮೊಬೈಲ್ ಸಂಖ್ಯೆ ಲಿಂಕ್ ಆಗಿರಬೇಕು. ಮತ್ತು ಬ್ಯಾಂಕ್ ಖಾತೆ ಓಅ ರಡಿ ಸೀಡ್ ಆಗಿರಬೇಕು.

ಆಸಕ್ತರು ವೆಬ್‌ಸೈಟ್: ತಿತಿತಿ.ಇಜ.ಇಚಿಡಿಟಿಚಿಣಚಿಇಚಿ..ಟಿ ಲಿಂಕ್ ಮೂಲಕ ಅರ್ಜಿಯನ್ನು ದಿನಾಂಕ:31.12.2026ರ ಒಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ: 8029605888/ 8762249230ಗೆಕಚೇರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ರಾಜಶೇಖರ್ ಪಾಟೀಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಲಾವಿದರ ಗುರುತಿನ ಚೀಟಿಗೆ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 01 (ಕರ್ನಾಟಕ ವಾರ್ತೆ): ಈ ಹಿಂದೆ ಕಲಾವಿದರ ಗುರುತಿನ ಚೀಟಿಗೆ ಹೊಸ ಕಲಾವಿದರು ರಾಯಚೂರು ಜಿಲ್ಲೆಯಲ್ಲಿ ಬಾಕಿ ಇದ್ದಲ್ಲಿ ಅಂತಹವರನ್ನು ಗುರುತಿಸಿ ಎರಡನೇ ಹಂತದಲ್ಲಿ ಗುರುತಿನ ಚೀಟಿಯನ್ನು ನೀಡಲು ದಿನಾಂಕ: 01.09.2026 ರಿಂದ ದಿನಾಂಕ: 30.09.2026ರವರೆಗೆ ಮಾತ್ರ ಮತ್ತೊಮ್ಮೆ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಪಡೆದು ಭರ್ತಿ ಮಾಡಿ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಾಯಚೂರು ಕಚೇರಿಗೆ ಸಬಂಧಿಸಿದ ದಾಖಲೆಗಳೊಂದಿಗೆ ಸಲ್ಲಿಸಬಹುದಾಗಿದೆ. ನಿಗದಿತ ದಿನಾಂಕದ ನಂತರ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಅಮೃತ ವಾಣಿ**

**ಉದ್ದೇಶ ಒಳ್ಳೆಯದಿದ್ದರೆ ದೇವರು ಅದೃಷ್ಟಕ್ಕಿಂತ ಹೆಚ್ಚಿನದನ್ನು ಕೊಡುತ್ತಾನೆ.**

**1573 ನೆಯ ದಿನಕ್ಕೆ ಏಮ್ಸ್ ಹೋರಾಟ**

## ಜುಬಿನ್ ಮೊಹಾಪಾತ್ರ ವರ್ಗಾವಣೆ ತಡೆದು ರಾಯಚೂರಿನಲ್ಲೇ ಮುಂದುವರಿಸಲಿ: ಮಹಾವೀರ್ ಒತ್ತಾಯ



ರಾಯಚೂರು: ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾಗಿದ್ದ ದಕ್ಷ ಅಧಿಕಾರಿ ಜುಬಿನ್ ಮೊಹಾಪಾತ್ರ ಅವರನ್ನು ಏಕಾಏಕಿ ವರ್ಗಾವಣೆ ಮಾಡಿರುವುದು ಖಂಡನೀಯವಾಗಿದ್ದು, ಅವರ ವರ್ಗಾವಣೆ ಆದೇಶವನ್ನು ತಡೆಹಿಡಿದು ರಾಯಚೂರಿನಲ್ಲೇ ಮುಂದುವರಿಸಬೇಕು ಎಂದು ಮಾರುಕಟ್ಟೆ ಕ್ಷೇಮಾಭಿವೃದ್ಧಿ ಸಂಘದ ಮುಖಂಡ ಮಹಾವೀರ್ ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಯಚೂರು ನಗರಸಭೆಯಿಂದ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿದ ಬಳಿಕ ನಗರದ ಮೂಲಸೌಕರ್ಯ ಅಭಿವೃದ್ಧಿಗೆ ಜುಬಿನ್ ಮೊಹಾಪಾತ್ರ ಅವರು ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ನಗರದ ಸ್ವಚ್ಛತೆ, ಕುಡಿಯುವ ನೀರು, ವಿದ್ಯುತ್ ಸೇರಿದಂತೆ ಸಾರ್ವಜನಿಕರ ಮೂಲಭೂತ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ, ಸ್ಥಳದಲ್ಲಿಯೇ ಪರಿಹಾರ ಕಲ್ಪಿಸಲು ಅವರು ಮುಂದಾಗುತ್ತಿದ್ದರು. ಇಂತಹ ದಕ್ಷ ಅಧಿಕಾರಿಯನ್ನು ಅಲ್ಪಾವಧಿಯಲ್ಲೇ ವರ್ಗಾವಣೆ ಮಾಡಿರುವುದು ನಗರದ ಅಭಿವೃದ್ಧಿಯ ದೃಷ್ಟಿಯಿಂದ ಸೂಕ್ತ ಕ್ರಮವಲ್ಲ ಎಂದು ಅಭಿಪ್ರಾಯಪಟ್ಟರು.

ಜುಬಿನ್ ಮೊಹಾಪಾತ್ರ ಅವರ ವರ್ಗಾವಣೆಯನ್ನು ಖಂಡಿಸಿ ವಿವಿಧ ಸಂಘ-ಸಂಸ್ಥೆಗಳು ನಡೆಸುತ್ತಿರುವ ಹೋರಾಟಕ್ಕೆ ಮಾರುಕಟ್ಟೆ ಕ್ಷೇಮಾಭಿವೃದ್ಧಿ ಸಂಘದ ಸಂಪೂರ್ಣ ಬೆಂಬಲವಿದೆ. ನಗರದ ಅಭಿವೃದ್ಧಿ ವಿಚಾರದಲ್ಲಿ ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಎಲ್ಲ ಜನಪ್ರತಿನಿಧಿಗಳು ಹಾಗೂ ಮುಖಂಡರು ಒಗ್ಗಟ್ಟಿನಿಂದ ಧ್ವನಿ ಎತ್ತಬೇಕು ಎಂದು ಮನವಿ ಮಾಡಿದರು.

ಇತರ ಜಿಲ್ಲೆಗಳ ಜನಪ್ರತಿನಿಧಿಗಳು ತಮ್ಮ ಜಿಲ್ಲೆಯ ಅಭಿವೃದ್ಧಿ ವಿಚಾರದಲ್ಲಿ ಪಕ್ಷಭೇದ ಮರೆತು ಒಂದಾಗುವಂತೆ, ರಾಯಚೂರು ಜಿಲ್ಲೆಯ ರಾಜಕೀಯ ನಾಯಕರು ಸಹ ಜಿಲ್ಲೆಯ ಹಿತಾಸಕ್ತಿಗಾಗಿ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು. ಪದೇಪದೇ ದಕ್ಷ ಅಧಿಕಾರಿಗಳನ್ನು ವರ್ಗಾವಣೆ ಮಾಡುವುದರಿಂದ ಆಡಳಿತಾತ್ಮಕ ವ್ಯವಸ್ಥೆಗೆ ಹಾಗೂ ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆಯಾಗುತ್ತದೆ ಎಂದು ಹೇಳಿದರು.

ಈ ಹಿಂದೆ ದಕ್ಷವಾಗಿ ಕಾರ್ಯನಿರ್ವಹಿಸುತ್ತಿದ್ದ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟ ಮಾದಯ್ಯ ಅವರನ್ನೂ ವರ್ಗಾವಣೆ ಮಾಡಲಾಗಿತ್ತು. ಯಾವುದೇ ಅಧಿಕಾರಿಗೆ ಕನಿಷ್ಠ ಎರಡು ವರ್ಷಗಳ ಕಾಲ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸಲು ಅವಕಾಶ ನೀಡಿದರೆ ಉತ್ತಮ ಆಡಳಿತ ನಡೆಸಲು ಹಾಗೂ ಅಭಿವೃದ್ಧಿ ಕಾರ್ಯಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅನುಕೂಲವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ರಾಯಚೂರು ನಗರದ ಜನರ ಹಿತಾಸಕ್ತಿ ಮತ್ತು ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಜುಬಿನ್ ಮೊಹಾಪಾತ್ರ ಅವರ ವರ್ಗಾವಣೆ ಆದೇಶವನ್ನು ಸರ್ಕಾರ ಮರುಪರಿಶೀಲಿಸಿ ತಡೆಹಿಡಿಯಬೇಕು. ಈ ಸಂಬಂಧ ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಸಿಂಗ್ ಅವರಿಗೆ ಮನವಿ ಸಲ್ಲಿಸಲಾಗುವುದು ಎಂದು ಮಹಾವೀರ್ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಪ್ರಭು ನಾಯಕ, ಈರೇಶ್, ಉದಯ್ ಕುಮಾ್ರ್ ಬಸವರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಹೂಡಿಕೆದಾರರ ಹಣ ಮರುಪಾವತಿಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಧರಣಿ







ರಾಯಚೂರು: ದರ್ವೇಶ್ ಗ್ರೂಪ್ ಕಂಪನಿಯಲ್ಲಿ ಹೂಡಿಕೆ ಮಾಡಿ ಹಣ ಕಳೆದುಕೊಂಡಿರುವ ಹೂಡಿಕೆದಾರರಿಗೆ ನ್ಯಾಯ ಒದಗಿಸಿ, ಕಾನೂನುಬದ್ಧವಾಗಿ ಅವರ ಹಣವನ್ನು ಶೀಘ್ರ ಮರುಪಾವತಿಸಬೇಕು ಎಂದು ಆಗ್ರಹಿಸಿ ನಗರದ ಹೂಡಿಕೆದಾರರು ಮಂಗಳವಾರ ಶಾಂತಿಯುತ ಪಾದಯಾತ್ರೆ ನಡೆಸಿ ಅನಿರ್ದಿಷ್ಟಾವಧಿ ಧರಣಿ ಆರಂಭಿಸಿದರು.

ನಗರದ ತೀನ್ ಕಂದಿಲ್‌ನಿಂದ ಆರಂಭವಾದ ಪಾದಯಾತ್ರೆಯು ಚಂದ್ರಮೌಳೇಶ್ವರ ವೃತ್ತ, ಗಾಂಧಿ ವೃತ್ತ ಸೇರಿದಂತೆ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಟಿಪ್ಪು ಸುಲ್ತಾನ್ ಉದ್ಯಾನವನಕ್ಕೆ ತಲುಪಿತು. ಬಳಿಕ ಹೂಡಿಕೆದಾರರು ಅಲ್ಲಿಯೇ ಧರಣಿ ನಡೆಸಿ ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರವನ್ನು ಒತ್ತಾಯಿಸಿದರು.

ಪ್ರತಿಭಟನಾಕಾರರು ವಿವಿಧ ಘೋಷಣಾ ಫಲಕಗಳನ್ನು ಪ್ರದರ್ಶಿಸಿ, ತಾವು ಹೂಡಿಕೆ ಮಾಡಿದ ಹಣವನ್ನು ಮರಳಿಸಬೇಕು ಹಾಗೂ ಪ್ರಕರಣವನ್ನು ಶೀಘ್ರವಾಗಿ ಇತ್ಯರ್ಥಪಡಿಸಬೇಕು ಎಂದು ಘೋಷಣೆ ಕೂಗಿದರು.

ಧರಣಿಯನ್ನುದ್ದೇಶಿಸಿ ಮಾತನಾಡಿದ ಅಂಬಾಜಿ ರಾವ್, ಸಾವಿರಾರು ಕುಟುಂಬಗಳು ತಮ್ಮ ಕಷ್ಟಪಟ್ಟು ದುಡಿದು ಸಂಗ್ರಹಿಸಿದ ಹಣವನ್ನು ದರ್ವೇಶ್ ಗ್ರೂಪ್ ಕಂಪನಿಯಲ್ಲಿ ಹೂಡಿಕೆ ಮಾಡಿವೆ. ಆದರೆ ಕಳೆದ ಸುಮಾರು ಎರಡೂವರೆ ವರ್ಷಗಳಿಂದ ಹಣ ಮರುಪಾವತಿಯಾಗದ ಪರಿಣಾಮ ಅನೇಕ ಕುಟುಂಬಗಳು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಮಕ್ಕಳ ಶಿಕ್ಷಣ, ಆರೋಗ್ಯ ಚಿಕಿತ್ಸೆ, ಮನೆ ನಿರ್ಮಾಣ ಸೇರಿದಂತೆ ಕುಟುಂಬದ ವಿವಿಧ ಅಗತ್ಯಗಳಿಗಾಗಿ ಸಂಗ್ರಹಿಸಿದ್ದ ಹಣವನ್ನು ಹೂಡಿಕೆ ಮಾಡಿದ ಹಲವರು ಇಂದು ಸಂಕಷ್ಟ ಎದುರಿಸುತ್ತಿದ್ದಾರೆ. ಸರ್ಕಾರ ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಸಂತ್ರಸ್ತ ಹೂಡಿಕೆದಾರರಿಗೆ ನ್ಯಾಯ ದೊರಕಿಸಿಕೊಡಬೇಕು ಎಂದು ಆಗ್ರಹಿಸಿದರು.

ಪ್ರಕರಣದ ತನಿಖೆಯನ್ನು ತ್ವರಿತವಾಗಿ ಹಾಗೂ ನಿಷ್ಪಕ್ಷಪಾತವಾಗಿ ಪೂರ್ಣಗೊಳಿಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು. ಜೊತೆಗೆ ಹೂಡಿಕೆದಾರರ ಹಿತಾಸಕ್ತಿಯನ್ನು ಕಾಪಾಡುವ ನಿಟ್ಟಿನಲ್ಲಿ ಕಾನೂನುಬದ್ಧ ಕ್ರಮಗಳ ಮೂಲಕ ಅವರ ಹಣವನ್ನು ಮರುಪಾವತಿಸಲು ಸರ್ಕಾರ ಮುಂದಾಗಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ತಮ್ಮ ಬೇಡಿಕೆಗಳಿಗೆ ಸೂಕ್ತ ಸ್ಪಂದನೆ ದೊರೆತು ಹೂಡಿಕೆದಾರರ ಸಮಸ್ಯೆಗೆ ಶಾಶ್ವತ ಪರಿಹಾರ ಸಿಗುವವರೆಗೆ ಅನಿರ್ದಿಷ್ಟಾವಧಿ ಧರಣಿಯನ್ನು ಮುಂದುವರಿಸಲಾಗುವುದು ಎಂದು ಎಚ್ಚರಿಸಿದರು.

ಧರಣಿಯಲ್ಲಿ ಮಸೂದ್, ಜಾಫ್ರ್ ಮಹೇರುನ್ ನಿಸಾ, ಸೈಯದ್ ಹಸನ್, ಭಾಷಾ, ಸುಲ್ತಾನ್ ಸೇರಿದಂತೆ ಹಲವು ಹೂಡಿಕೆದಾರರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

## ಪಟ್ಟಣಕ್ಕೆ ರಘು ಕೌಟಿಲ್ಯ ಭೇಟಿ ಸಮುದಾಯದ ಮುಖಂಡರಿಂದ ಸನ್ಮಾನ



ಸಿರವಾರ : ಬಿಜೆಪಿ ಪಕ್ಷದ ವಿಧಾನ ಪರಿಷತ್ ಸದಸ್ಯರಾದ ರಘು ಕೌಟಿಲ್ಯ ಅವರು ಸಿರವಾರ ಪಟ್ಟಣಕ್ಕೆ ಭೇಟಿ ಕೊಟ್ಟರು.

ಅವರು ಪಟ್ಟಣದ ಪ್ರವಾಸಿ ಮಂದಿರಕ್ಕೆ ಆಗಮಿಸಿದರು ಈ ಸಮಯದಲ್ಲಿ ಸಿರವಾರ ತಾಲೂಕಿನ ಮಡಿವಾಳ ಸಮುದಾಯದ ಮುಖಂಡರು,ಬಿಜೆಪಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಸರಿ ಅವರನ್ನು ಸನ್ಮಾನಿಸಿ ಗೌರವಿಸಿದರು

ನಂತರ ಪತ್ರಕರ್ತರೊಂದಿಗೆ ಮಾತನಾಡಿದವರು ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಜನ ವಿರೋಧಿ ಸರಕಾರವಾಗಿದೆ ಇದರಿಂದ ಕಾಂಗ್ರೆಸ್ ಪಕ್ಷದ ಭ್ರಷ್ಟಾಚಾರವನ್ನು ಜನಗಳಿಗೆ ಮುಟ್ಟಿಸುವ ಕೆಲಸ ನಮ್ಮ ಪಕ್ಷ ನಿರಂತರವಾಗಿ ಮಾಡುತ್ತದೆ ಎಂದರು

ಈ ಸಂದರ್ಭದಲ್ಲಿ ಮಡಿವಾಳ ಸಮುದಾಯದ ಹಿರಿಯ ಮುಖಂಡರಾದ, ನರಸಪ್ಪ ಯಕ್ಲಾಸಪುರ, ಬಿ ಶರಣಪ್ಪ, ರಾಜಕುಮಾ್ರ್ ಬಸವರಾಜ್ ನಾಗಡಿದಿನ್ನಿ, ಭೂದೆಪ್ಪ, ಹುಲಿಗೆಪ್ಪ, ರಂಗಪ್ಪ, ಶಿವಪ್ಪ ಜಾಲಹಳ್ಳಿ, ಯಲ್ಲಪ್ಪ, ಪ್ರಕಾಶ್, ರವಿಕುಮಾ್ರ್ ಬಸವರಾಜ್ ಮಾಡಿಗಿರಿ, ಮಂಜುನಾಥ, ಸೇರಿದಂತೆ ಇನ್ನಿತರದಿದ್ದರು.

# ಮೊದಲನೇ ಪುಟದಿಂದ

## ನಕಲಿ ವೈದ್ಯರ ಕ್ಲಿನಿಕ್‌ಗಳ ಮೇಲೆ ಏಕಕಾಲಕ್ಕೆ ದಾಳಿ

ಯಾರು ನಿಯಮ ಉಲ್ಲಂಘಿಸಿ ನಡೆಸುತ್ತಿರುವ ಕ್ಲಿನಿಕ್‌ಗಳು, ಆಸ್ಪತ್ರೆಗಳು ಮತ್ತು ಇತರೆ ವೈದ್ಯಕೀಯ ಚಿಕಿತ್ಸಾ ಕೇಂದ್ರಗಳ ಮೇಲೆ ಮುಂದೆಯು ಸಹ ನಿರಂತರವಾಗಿ ದಾಳಿ ಮಾಡಲಾಗುವುದು ಎಂದರು.

ಸಾರ್ವಜನಿಕರು ಜಾಗೃತರಾಗಿ: ಜಿಲ್ಲೆಯ ಜನತೆಯ ಆರೋಗ್ಯದ ದೃಷ್ಟಿಯಿಂದ ನಕಲಿ ವೈದ್ಯರ ವಿರುದ್ದ ದಾಳಿ ಮಾಡಲಾಗುತ್ತಿದ್ದು, ಸಾರ್ವಜನಿಕರು ಚಿಕಿತ್ಸೆಗೆ ಅಧಿಕೃತ ವೈದ್ಯ ಪದವಿ ಪಡೆದ ವೈದ್ಯರ ಬಳಿ ಅಥವಾ ಹತ್ತಿರದ ಸರಕಾರಿ ಆರೋಗ್ಯ ಕೇಂದ್ರಗಳಲ್ಲಿ ಚಿಕಿತ್ಸೆ ಪಡೆಯಬೇಕು. ಸಾಮಾನ್ಯವಾಗಿ ಯಾವುದೇ ವೈದ್ಯಕೀಯ ಪದವಿ ಪಡೆದ ನಂತರ ಕ್ಲಿನಿಕ್ ಅಥವಾ ಆಸ್ಪತ್ರೆ ಆರಂಭಿಸಲು ಖಡ್ಡಾಯವಾಗಿ ಅನುಮತಿಯ ನೋಂದಣಿ ಪ್ರಮಾಣ ಪತ್ರ ಇರಬೇಕು. ಅನುಮತಿ ಪಡೆದ ನಂತರವೇ ಕ್ಲಿನಿಕ್ ಆರಂಭಿಸಬೇಕು. ಯಾವುದೇ ವೈದ್ಯ ಪದವಿ ಇಲ್ಲದೆ, ಕ್ಲಿನಿಕ್ ನಡೆಸುವುದು ಅಥವಾ ಮನೆ ಮನೆಗೆ ತೆರಳಿ ಜನತೆಗೆ ಚಿಕಿತ್ಸೆ ನೀಡುವುದು ಸಹ ಕ್ರಿಮಿನಲ್ ಅಪರಾಧವಾಗಿದ್ದು, ಇವರು ನೀಡುವ ಔಷಧಿಗಳ ಅಡ್ಡ ಪರಿಣಾಮದಿಂದ ಅನಾರೋಗ್ಯಕ್ಕೆ ಒಳಗಾಗುವ ಅಪಾಯವಿದ್ದು, ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಜಾಗೃತರಾಗಬೇಕೆಂದು ಜಿಲ್ಲಾ ಆರೋಗ್ಯ ಇಲಾಖೆಯ ಅಧಿಕಾರಿಗಳು ಕೋರಿದ್ದಾರೆ.

ದಾಳಿಯನ್ನು ವಿವಿಧ ತಾಲೂಕುಗಳಲ್ಲಿ ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅಧಿಕಾರಿ ಡಾ.ಶಿವಕುಮಾ್ರ್ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ್ ಕೆ., ಜಿಲ್ಲಾ ಡಿವಿಬಿಡಿಸಿಪಿ ಅಧಿಕಾರಿ ಡಾ.ಚಂದ್ರಶೇಖರಯ್ಯ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಶಂಕರ್ ಗೌಡ, ಸಹಾಯಕ ಔಷಧಿ ನಿಯಂತ್ರಕರರಾದ ಉದಯ್ ಕಿಶೋ್ರ್ ತಾಲೂಕಾ ಆರೋಗ್ಯಾಧಿಕಾರಿಗಳಾದ ಡಾ.ಬನದೇಶ್, ಡಾ.ಶರಣಬಸವರಾಜ್ , ಡಾ.ಸತೀಶ್, ಡಾ.ರವಿಕೀರಣ್, ಹಾಗೂ ಕಂದಾಯ ಇಲಾಖೆ, ಪಂಚಾಯತ್ ರಾಜ್ ಇಲಾಖೆ, ಪೋಲಿಸ್ ಇಲಾಖೆ, ಆಯುಷ್ ಇಲಾಖೆ ಸೇರಿದಂತೆ ಇತರೆ ಅಧಿಕಾರಿಗಳು ಇದ್ದರು.

## ಅರ್ಹ ಫಲಾನುಭವಿಗಳಿಗೆ ಸರಿಯಾಗಿ ಹಣ ಜಮೆಯಾಗಲಿ: ಪಾಮಯ್ಯ ಮುರಾರಿ

ಅವರ ಕುಟುಂಬ ಸದಸ್ಯರು 15.13 ಲಕ್ಷರೂ. ಬಳಕೆ ಮಾಡಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಮಾಹಿತಿ ನೀಡಿದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕಾಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ಬ್ಯಾಂಕ್‌ಗಳಿದ ಸರ್ಕಾರಕ್ಕೆ ಮರುಪಾವತಿ ಮಾಡಬೇಕಾದ ಮೊತ್ತವನ್ನು ಪಾವತಿ ಮಾಡಲು ಬ್ಯಾಂಕ್‌ಗಳಿಗೆ ಕೆ.2 ಚಲನ್ ಬಗ್ಗೆ ತರಬೇತಿ ಬೇಕಿದ್ದರೆ ನೀಡಲಾಗುತ್ತದೆ ಎಂದರು.

ಯೋಜನೆಗಳ ಪ್ರಗತಿ: ಜಿಲ್ಲೆಯಾದ್ಯಂತ ಅನ್ನಭಾಗ್ಯ ಯೋಜನೆಯಡಿ 2026ರ ಜುಲೈ ರವರೆಗೆ 4,05,770 ಪಡಿತರ ಚೀಟಿಗಳಿದ್ದು, ಅರ್ಹ ಫಲಾನುಭವಿಗಳಿಗೆ ಅನ್ನಭಾಗ್ಯ ಯೋಜನಯಡಿ ಆಹಾರ ಧಾನ್ಯವನ್ನು ಪಡಿತರ ಚೀಟಿಗಳಿಗೆ ಸಾರ್ವಜನಿಕ ವಿತರಣಾ ಪದ್ದತಿಯಡಿ ಪಡಿತರ ವಿತರಣೆ ಮಾಡಲಾಗುತ್ತಿದೆ. ಗೃಹಲಕ್ಷ್ಮೀ ಯೋಜನೆಯಡಿ 2026ರ ಜೂನ್ ರವರೆಗೆ 435504 ಫಲಾನುಭವಿಗಳು ನೋಂದಾಯಿಸಿಕೊಡಿದ್ದು, ಒಟ್ಟು 871008000 ರೂ.ಗಳನ್ನು ಫಲಾನುಭವಿಗಳ ಖಾತೆಗೆ ವರ್ಗಾಯಿಸಲಾಗಿದ್ದು, ಜುಲೈ ತಿಂಗಳಿನ ಅನುದಾನ ಬಿಡುಗಡೆ ಆಗಿರುವುದಿಲ್ಲ. ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ ಅರ್ಹ ಒಟ್ಟು 344156 ಫಲಾನುಭವಿಗಳಿಗೆ 512.54 ಕೋಟಿ ರೂ. ವೆಚ್ಚ ಭರಿಸಲಾಗಿದೆ. ಶಕ್ತಿ ಯೋಜನೆಯಡಿ 1374.96 ಲಕ್ಷ ಮಹಿಳೆಯರು ಉಚಿತವಾಗಿ ಪ್ರಯಾಣಿಸುವುದರ ಮೂಲಕ ಯೋಜನೆಯ ಸೌಲಭ್ಯ ಪಡೆಯುತ್ತಿದ್ದು, ಒಟ್ಟು 3043.02 ಕೋಟಿ ರೂ. ಅನುದಾನವನ್ನು ಸರ್ಕಾರದಿಂದ ನೀಡಲಾಗಿದೆ. ಯುವನಿಧಿ ಯೋಜನೆಯಡಿ ಜಿಲ್ಲೆಯಾದ್ಯಂತ ಒಟ್ಟು 8280 ಪದವಿ ಹಾಗೂ 200 ಡಿಪ್ಲೋಮಾ ಪೂರ್ಣಗೊಳಿಸಿದ ನೋಂದಾಯಿತ ಫಲಾನುಭವಿಗಳು ಯೋಜನೆಯ ಲಾಭ ಪಡೆಯುತ್ತಿದ್ದು, ಒಟ್ಟು 25140000 ರೂ.ಗಳನ್ನು ಫಲಾನುಭವಿಗಳ ಖಾತೆಗೆ ವರ್ಗಾಯಿಸಲಾಗಿದೆ ಎಂದು ಸಂಬಧಿಸಿದ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋನಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಮಟ್ಟದ ಉಪಾಧ್ಯಕ್ಷರಾದ ನಾಗೇಂದ್ರ ಮಟಮಾರಿ, ಹನುಮಂತಪ್ಪ ಜಾಲಿಬೆಂಚಿ, ಸದಸ್ಯರಾದ ಬಿ.ಕೆ.ಅಮರೇಶ, ಲಕ್ಷ್ಮಣ ಜ್ಯೋತಿ, ಮಹೆಬೂಬ್ ಸಾಬ್, ಅನಿಲ ಕುಮಾ್ರ್ ವೆಂಕಟೇಶ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮದ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಶರಣಮ್ಮ, ಜೆಸ್ಕಾಂ ಇಲಾಖೆಯ ಮೋಹನ್, ಜಿಲ್ಲಾ ಉದ್ಯೋಗಾಧಿಕಾರಿಗಳಾದ ನವೀನಕುಮಾರ್ ಸಂಗೇಪಾಗ್, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯವವರು ಸಭೆಯಲ್ಲಿ ಇದ್ದರು.

## ಕುಮಾರಸ್ವಾಮಿ ಬಳಿ ದಾಖಲೆಗಳಿದ್ದರೆ ಬಹಿರಂಗಪಡಿಸಲಿ: ಎ. ವಸಂತಕುಮಾರ ಸವಾಲು

ಆಧಾರರಹಿತ ಆರೋಪಗಳ ಮೂಲಕ ಕಾಂಗ್ರೆಸ್ ಸರ್ಕಾರದ ವಿರುದ್ಧ ಜನರಲ್ಲಿ ತಪ್ಪು ಕಲ್ಪನೆ ಮೂಡಿಸುವ ಪ್ರಯತ್ನ ಮಾಡಬಾರದು ಎಂದು ಹೇಳಿದರು.

ರಾಜ್ಯದ ಜನತೆ ಎಲ್ಲವನ್ನೂ ಗಮನಿಸುತ್ತಿದ್ದಾರೆ. ಕಾಂಗ್ರೆಸ್ ಸರ್ಕಾರದ ವಿರುದ್ಧ ಮಾಡಲಾಗುತ್ತಿರುವ ಯಾವುದೇ ಆರೋಪಕ್ಕೆ ಪಕ್ಷ ಸೂಕ್ತ ವೇದಿಕೆಯಲ್ಲಿ ಉತ್ತರ ನೀಡಲಿದೆ. ಕೇಂದ್ರ ಸಚಿವರು ತಮ್ಮ ಬಳಿ ಇರುವುದಾಗಿ ಹೇಳಲಾಗುತ್ತಿರುವ ದಾಖಲೆಗಳನ್ನು ಸಾರ್ವಜನಿಕವಾಗಿ ಬಿಡುಗಡೆ ಮಾಡಿದರೆ ಅದರ ಸತ್ಯಾಸತ್ಯತೆ ಜನರ ಮುಂದೆಯೇ ನಿರ್ಧಾರವಾಗಲಿದೆ ಎಂದು ವಸಂತಕುಮಾರ ಹೇಳಿದರು.

ಪ್ರತಿಭಟನೆಯಲ್ಲಿ ಜಯಣ್ಣ, ಜಿ. ಶಿವಮೂರ್ತಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ. ಶಾಂತಪ್ಪ, ರುದ್ರಪ್ಪ ಅಂಗಡಿ, ಅಮರೇಗೌಡ ಹಂಚಿನಾಳ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಪಾಮಯ್ಯ ಮುರಾರಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಪವನ ಕಿಶೋರ ಪಾಟೀಲ, ಸಿಂಡಿಕೇಟ್ ಸದಸ್ಯ ಚನ್ನಬಸವ ದದ್ದಲ್, ವೀರೇಶಗೌಡ ಎಲ್.ಕೆ. ದೊಡ್ಡಿ, ಎಂ. ಈರಣ್ಣ, ಯೇಸು ಮಿತ್ತ ಸೇರಿದಂತೆ ಹಲವರು ಭಾಗವಹಿಸಿದ್ದರು.

ಮಹಿಳಾ ಕಾಂಗ್ರೆಸ್ ರಾಷ್ಟ್ರೀಯ ಕಾರ್ಯದರ್ಶಿ ಶ್ರೀದೇವಿ ನಾಯಕ, ಮಂಜುಳಾ ಅಮರೇಶ, ರಾಜ್ಯ ಕಾರ್ಯದರ್ಶಿ ವಂದನಾ, ರಾಣಿ ರಿಚರ್ಡ್, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ನಿರ್ಮಲಾ ಬೆಣ್ಣೆ, ನಗರಾಧ್ಯಕ್ಷೆ ಸುರೇಖಾ, ಮಾಲಾ ಭಜಂತ್ರಿ ಸೇರಿದಂತೆ ಮಹಿಳಾ ಕಾಂಗ್ರೆಸ್‌ನ ವಿವಿಧ ಹಂತದ ಪದಾಧಿಕಾರಿಗಳು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಉಪಸ್ಥಿತರಿದ್ದರು.

## ಕೊಪ್ಪಳ ಜಿಲ್ಲೆಯ ಇಂದರಗಿ ಗ್ರಾಮ ಪಂಚಾಯತಿ ಪಿಡಿಒ ಅಮಾನತು

ಕೊಪ್ಪಳ ಸೆಪ್ಟೆಂಬರ್ 01, (ಕರ್ನಾಟಕ ವಾರ್ತೆ): ಕೊಪ್ಪಳ ತಾಲೂಕಿನ ಇಂದರಗಿ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ನಾಗರಾಜ್ ಎಸ್. ಹೆಚ್. ಅವರನ್ನು 15ನೇ ಹಣಕಾಸು ಯೋಜನೆಯ ಅನುದಾನ ದುರುಪಯೋಗ ಹಾಗೂ ಸಾಲು ಸಾಲು ಕರ್ತವ್ಯ ಲೋಪಗಳ ಆರೋಪದ ಹಿನ್ನೆಲೆಯಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತುಗೊಳಿಸಿ ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಆದೇಶ ಹೊರಡಿಸಿದ್ದಾರೆ.

ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 10 (1) (ಡಿ) ರನ್ವಯ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಈ ಕ್ರಮ ಕೈಗೊಳ್ಳಲಾಗಿದೆ.

ಪ್ರಕರಣದ ಹಿನ್ನೆಲೆ ಮತ್ತು ದೂರುಗಳು:

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಇಂದರಗಿ ಗ್ರಾಮ ಘಟಕದ ಮಂಜುನಾಥ ಹೆಚ್. ಡೊಳ್ಳಿನ್ ಹಾಗೂ ಕರ್ಕಿಹಳ್ಳಿಯ ದ್ಯಾಮಣ್ಣ ಕೆ. ಹರಿಜನ ಅವರು ಸಲ್ಲಿಸಿದ್ದ ದೂರುಗಳ ಆಧಾರದ ಮೇಲೆ ತನಿಖೆಗೆ ಸೂಚಿಸಲಾಗಿತ್ತು. ಕುಕನೂರು ತಾಲೂಕು ಯೋಜನಾಧಿಕಾರಿ ಆನಂದ ಗರೂರು ಅವರು ನಡೆಸಿದ ತನಿಖಾ ವರದಿಯಲ್ಲಿ ಪಿಡಿಒ ನಾಗರಾಜ್ ಎಸ್. ಹೆಚ್. ಅವರ ಅವಧಿಯಲ್ಲಿ ನಡೆದಿರುವ ಹಲವಾರು ಹಣಕಾಸಿನ ಅಕ್ರಮಗಳು ಮತ್ತು ಕರ್ತವ್ಯ ಲೋಪಗಳು ಬೆಳಕಿಗೆ ಬಂದಿವೆ.

ತನಿಖಾ ವರದಿಯಲ್ಲಿ ಕಂಡುಬದತೆ ಇಂದರಗಿ ಗ್ರಾಮಕ್ಕೆ ಕುಡಿಯುವ ನೀರಿನ ಸಾಮಗ್ರಿ ಖರೀದಿಗೆ ರೂ.85,083 ವೆಚ್ಚ ಮಾಡಿದ್ದು, ಹಿಂದಿನ ಪಿಡಿಒ ಯಾವುದೇ ದಾಖಲೆಗಳನ್ನು ನೀಡಿಲ್ಲ. ಸೋಲಾರ್ ಸ್ಟಿಟ್ ಲೈಟಿಂಗ್ ಇನ್‌ಸ್ಟಾಲೇಶನ್‌ಗೆ ರೂ. 1,50,000 ವೆಚ್ಚ ಭರಿಸಲಾಗಿದ್ದು, ಈ ಬಗ್ಗೆ ಯಾವುದೇ ದಾಖಲಾತಿಗಳನ್ನು ಒದಗಿಸಿಲ್ಲ. 2020-21 ರಲ್ಲಿ ಕಸ ವಿಲೇವಾರಿ ಸೇವೆಗಾಗಿ ರೂ.3,00,000 ವೆಚ್ಚ ಭರಿಸಲಾಗಿದೆ. 2020-21ನೇ ಸಾಲಿನಲ್ಲಿ ಕುಡಿಯುವ ನೀರಿನ ಸೇವೆಗಾಗಿ ರೂ.99,942 ಹಾಗೂ ಸಾಮಾನ್ಯ ಕಾಲೋನಿಯಲ್ಲಿ ಕುಡಿಯುವ ನೀರಿನ ನಿರ್ವಹಣೆಗೆ ರೂ.2,96,990 ವೆಚ್ಚ ಮಾಡಲಾಗಿದ್ದು, ಇವುಗಳಿಗೂ ಸೂಕ್ತ ದಾಖಲೆಗಳನ್ನು ಹಾಜರುಪಡಿಸಿಲ್ಲ.

ಘನ ತ್ಯಾಜ್ಯ ವಿಲೇವಾರಿ ವಾಹನಕ್ಕಾಗಿ ರೂ.1,50,000 ವೆಚ್ಚ ತೋರಿಸಲಾಗಿದೆಯಾದರೂ, ಗ್ರಾಮ ಪಂಚಾಯತಿಯಲ್ಲಿ ಕಳೆದ 8 ತಿಂಗಳಿನಿದ ಕಸ ಸಂಗ್ರಹಣೆ ಮಾಡಿಲ್ಲ. ಭೇಟಿ ನೀಡಿದಾಗ ವಾಹನವೂ ಪಂಚಾಯತಿಯಲ್ಲಿ ಕಂಡುಬದಿಲ್ಲ. ಮನೆ ಮನೆಗೆ ಕಸ ಸಂಗ್ರಹಣೆಯ ಬುಟ್ಟಿ ಖರೀದಿಗೆ ರೂ.1,20,000 ವೆಚ್ಚ ಮಾಡಲಾಗಿದ್ದು, ಇದಕ್ಕೆ ಸಂಬಧಿಸಿದ ದಾಖಲೆ ಒದಗಿಸಿಲ್ಲ. 2021-22 ರಲ್ಲಿ ನೈರ್ಮಲೀಕರಣಕ್ಕೆ ರೂ.1,09,284 ವೆಚ್ಚ ಮಾಡಿದ್ದರೂ, 1, 2 ಮತ್ತು 4ನೇ ವಾರ್ಡ್ಗಳಲ್ಲಿ ಚರಂಡಿಗಳ ಸ್ವಚ್ಛತೆ ಮಾಡಲು ಸಂಪೂರ್ಣವಾಗಿ ವಿಫಲರಾಗಿದ್ದಾರೆ.

2021-22 ರಲ್ಲಿ ವಿಕಲಚೇತನರ ಕಲ್ಯಾಣಕ್ಕಾಗಿ ಕಾಯ್ದಿರಿಸಿದ್ದ ರೂ.84,415 ಅನುದಾನವನ್ನು, ಸರ್ಕಾರದ ನಿಯಮಗಳನ್ನು ಉಲ್ಲಂಘಿಸಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಬಾಲಕಿಯರ ಶೌಚಾಲಯ ನಿರ್ಮಾಣಕ್ಕೆ ಬಳಸಲಾಗಿದೆ. 2022-23 ರಲ್ಲಿ ಗ್ರಂಥಾಲಯ, ಶೌಚಾಲಯ ನಿರ್ಮಾಣಕ್ಕೆ ರೂ.70,000 ವೆಚ್ಚ ಮಾಡಿದ್ದು, ಕಾಮಗಾರಿ ರೂ.67,443 ರಲ್ಲಿ ಪೂರ್ಣಗೊಂಡಿತ್ತು. ಆದರೆ, ಸಕ್ಷಮ ಪ್ರಾಧಿಕಾರದ ಅನುಮತಿ ಪಡೆಯದೇ ಆ ಶೌಚಾಲಯವನ್ನು ನೆಲಸಮಗೊಳಿಸಿ ಕರ್ತವ್ಯ ಲೋಪ ಎಸಗಿದ್ದಾರೆ. 2022-23 ರಲ್ಲಿ ರೂ.63,370 ವೆಚ್ಚದಲ್ಲಿ ಸಿ.ಸಿ ಕ್ಯಾಮೆರಾ ಅಳವಡಿಸಲಾಗಿದೆ. ಆದರೆ ಪರಿಶೀಲಿಸಿದ ಬಿಲ್ಲುಗಳಲ್ಲಿ ಜಿ.ಎಸ್.ಟಿ ಸಂಖ್ಯೆ ಹಾಗೂ ಪೂರೈಕೆದಾರರ ವಿಳಾಸ ಇರಲಿಲ್ಲ.

2022-23 ರಲ್ಲಿ ಇಂದರಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಕುಡಿಯುವ ನೀರು ಮತ್ತು ಬೀದಿ ದೀಪಗಳ ಅಳವಡಿಕೆಗೆ 5,37,769 ವೆಚ್ಚ ಮಾಡಲಾಗಿದೆ. ಒಂದೇ ತಿಂಗಳಿನಲ್ಲಿ 'ಪಾರ್ವತಿ ಎಂಟರ್‌ಪ್ರೆಸಸ್' ಎಂಬ ಒಂದೇ ಏಜೆನ್ಸಿಗೆ ನಿಯಮಾವಳಿಗಳಿಗೆ ವಿರುದ್ಧವಾಗಿ ಟೆಂಡರ್ ಕರೆಯದೆ ಖರೀದಿ ಮಾಡಿ ಕೆ.ಟಿ.ಪಿ.ಪಿ (ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ) ನಿಯಮಗಳನ್ನು ಉಲ್ಲಂಘಿಸಲಾಗಿದೆ.

15ನೇ ಹಣಕಾಸು ಯೋಜನೆಯ ಕ್ರಿಯಾ ಯೋಜನೆಯನ್ನು ಮಾರ್ಗಸೂಚಿಯಂತೆ ಸಿದ್ಧಪಡಿಸದೆ ನಿಯಮ ಉಲ್ಲಂಘಿಸಲಾಗಿದೆ. ಇ-ತಂತ್ರಾಶದಲ್ಲಿ ಬಹುತೇಕ ಎಲ್ಲಾ ಕಾಮಗಾರಿಗಳ ಛಾಯಾಚಿತ್ರಗಳನ್ನು ತಪ್ಪಾಗಿ ಅಪ್‌ಲೋಡ್ ಮಾಡಲಾಗಿದೆ.

ಈ ಮೇಲಿನ ಆರೋಪಗಳಿಗೆ ಸಂಬಧಿಸಿದತೆ ಜಿ.ಪಂ.ನಿದ ನೀಡಲಾಗಿದ್ದ ಕಾರಣ ಕೇಳುವ ನೋಟೀಸ್ ಗೆ ಪಿಡಿಒ ನಾಗರಾಜ್ ಎಸ್. ಹೆಚ್. ಅವರು ದಿನಾಂಕ: 03-08-2026 ರಂದು ನೀಡಿದ ಲಿಖಿತ ಸಮಜಾಯಿಷಿ/ಹೇಳಿಕೆ ಸಮಂಜಸವಾಗಿಲ್ಲದ ಕಾರಣ, ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತುಗೊಳಿಸಲಾಗಿದೆ. ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು 1958 ರ ನಿಯಮ 98 ರನ್ವಯ ಆಪಾದಿತರು ಜೀವನಾಂಶ ಭತ್ಯೆ ಪಡೆಯಲು ಅರ್ಹರಿರುತ್ತಾರೆ. ಸಕ್ಷಮ ಪ್ರಾಧಿಕಾರದ ಅನುಮತಿಯಿಲ್ಲದೆ ಅಮಾನತಿನಲ್ಲಿರುವ ಅಧಿಕಾರಿಯು ಕೇಂದ್ರಸ್ಥಾನವನ್ನು ಬಿಟ್ಟು ತೆರಳುವಂತಿಲ್ಲ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

## ಹೆಚ್‌ಐವಿ ತಡೆಗೆ ಜಾಗೃತಿಯೇ ಪರಿಣಾಮಕಾರಿ ಅಸ್ತ್ರ: ಡಾ. ನಂದಿತಾ ಎಂ.ಎನ್




ರಾಯಚೂರು, ಸೆ.1: ಆಕಸ್ಮಿಕವಾಗಿಯೋ, ಅರಿವಿನ ಕೊರತೆಯಿಂದಾಗಿಯೋ ಒಮ್ಮೆ ಹೆಚ್ ಐವಿ ಸೋಂಕಿಗೆ ಒಳಗಾದರೆ ಜೀವನಪೂರ್ತಿ ಅದರೊಂದಿಗೆ ಬದುಕಬೇಕಾದ ಅನಿವಾರ್ಯತೆ ಎದುರಾಗುತ್ತದೆ. ಆದ್ದರಿಂದ ಸೋಂಕಿನಿಂದ ದೂರವಿರಲು ಪ್ರತಿಯೊಬ್ಬರೂ ಜಾಗೃತರಾಗಬೇಕು ಹಾಗೂ ಇತರರಲ್ಲೂ ಅರಿವು ಮೂಡಿಸುವ ಸಂಕಲ್ಪ ಮಾಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಂದಿತಾ ಎಂ.ಎನ್. ಕರೆ ನೀಡಿದರು.

ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಏಡ್ಸ್ ನಿಯಂತ್ರಣ ಘಟಕದ ಸಹಯೋಗದಲ್ಲಿ ಹಮ್ಮಿಕೊಂಡಿರುವ ಹೆಚ್‌ಐವಿ/ಏಡ್ಸ್ ಕುರಿತು ತೀವ್ರಗೊಳಿಸಿದ ಐಇಸಿ ಪ್ರಚಾರಾಂದೋಲನದ ಅಂಗವಾಗಿ ಬೀದಿ ನಾಟಕ ಪ್ರದರ್ಶನಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಲ್ಲಿ ಚಾಲನೆ ನೀಡಿ ಅವರು ಮಾತನಾಡಿದರು.

ಇಂದಿನಿಂದ ಆರು ದಿನಗಳ ಕಾಲ ಆಯ್ದ ಗ್ರಾಮಗಳು ಹಾಗೂ ಹೆಚ್ಚು ಜನರು ಸೇರುವ ಸಾರ್ವಜನಿಕ ಸ್ಥಳಗಳಲ್ಲಿ ಬೀದಿ ನಾಟಕ ತಂಡಗಳು ಪ್ರದರ್ಶನ ನೀಡುವ ಮೂಲಕ ಹೆಚ್‌ಐವಿ/ಏಡ್ಸ್ ಕುರಿತು ಜಾಗೃತಿ ಮೂಡಿಸಲಿವೆ ಎಂದು ತಿಳಿಸಿದರು.

ಜಾಗತಿಕ ಮಟ್ಟದಲ್ಲಿ ಹೆಚ್‌ಐವಿ ಪ್ರಕರಣಗಳು ಮತ್ತೆ ಹೆಚ್ಚಾಗಿ ವರದಿಯಾಗುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ. ಅಪರಿಚಿತರೊಂದಿಗೆ ಅಸುರಕ್ಷಿತ ಲೈಂಗಿಕ ಸಂಪರ್ಕ ಹೊಂದುವುದು, ಒಂದೇ ಸಿರಿಂಜ್ ಅಥವಾ ಸೂಜಿಯನ್ನು ಹಲವರು ಬಳಸುವುದು, ಹೆಚ್ ಐವಿ ಪರೀಕ್ಷೆಗೆ ಒಳಪಡಿಸದ ರಕ್ತವನ್ನು ಮತ್ತೊಬ್ಬರಿಗೆ ಪೂರೈಸುವುದು ಸೇರಿದಂತೆ ಕೆಲವು ಕಾರಣಗಳಿಂದ ಸೋಂಕು ಹರಡುವ ಸಾಧ್ಯತೆ ಇದೆ. ಹೆಚ್‌ಐವಿ ಸೋಂಕಿತ ಗರ್ಭಿಣಿಯರು ಅಗತ್ಯ ಮುಂಜಾಗ್ರತಾ ಕ್ರಮ ಮತ್ತು ಚಿಕಿತ್ಸೆ ಪಡೆಯದಿದ್ದಲ್ಲಿ ತಾಯಿಯಿಂದ ಮಗುವಿಗೂ ಸೋಂಕು ಹರಡುವ ಸಾಧ್ಯತೆ ಇರುತ್ತದೆ ಎಂದು ತಿಳಿಸಿದರು.

ಒಮ್ಮೆ ಹೆಚ್‌ಐವಿ ಸೋಂಕಿಗೆ ಒಳಗಾದರೆ ಜೀವನಪೂರ್ತಿ ಸೋಂಕಿನೊಂದಿಗೆ ಬದುಕಬೇಕಾಗುತ್ತದೆ ಎಂಬ ಗಂಭೀರತೆಯನ್ನು ವಿಶೇಷವಾಗಿ ಹದಿಹರೆಯದವರು ಹಾಗೂ ಯುವಜನರಿಗೆ ತಿಳಿಸಬೇಕಾಗಿದೆ. ಅವರ ಆರೋಗ್ಯವನ್ನು ಕಾಪಾಡುವ ಜವಾಬ್ದಾರಿ ಕುಟುಂಬ, ಸಮಾಜ ಹಾಗೂ ಆರೋಗ್ಯ ಇಲಾಖೆಯ ಪ್ರತಿಯೊಬ್ಬರ ಮೇಲೂ ಇದೆ ಎಂದು ಹೇಳಿದರು.

ಪ್ರಸ್ತುತ ಜಿಲ್ಲೆಯ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ಹೆಚ್‌ಐವಿ ಪರೀಕ್ಷೆಗೆ ಅಗತ್ಯ ವ್ಯವಸ್ಥೆ ಕಲ್ಪಿಸಲಾಗಿದೆ. ಸೋಂಕಿನ ಬಗ್ಗೆ ಯಾವುದೇ ಅನುಮಾನ ಹೊಂದಿರುವವರು ಹಿಂಜರಿಯದೆ ಸ್ವಯಂಪ್ರೇರಿತವಾಗಿ ಪರೀಕ್ಷೆಗೆ ಒಳಗಾಗಬೇಕು ಎಂದು ಸಲಹೆ ನೀಡಿದರು.

ಮೊಬಿಲೈಸೇಶನ್ ಫಾರ್ ಏಡ್ಸ್ ಸುರಕ್ಷಾ ಅಭಿಯಾನದಡಿ ಕ್ಯೂಆರ್ ಕೋಡ್ ಅನ್ನು ಮೊಬೈಲ್ ಮೂಲಕ ಸ್ಕ್ಯಾನ್ ಮಾಡಿ ಹೆಚ್‌ಐವಿ ಕುರಿತು ಪ್ರಶ್ನೋತ್ತರಗಳ ಮೂಲಕ ಮಾಹಿತಿ ಪಡೆದುಕೊಳ್ಳುವ ವ್ಯವಸ್ಥೆಯೂ ಲಭ್ಯವಿದೆ. ಸಂಶಯ ಕಂಡುಬಂದಲ್ಲಿ ಹತ್ತಿರದ ಆರೋಗ್ಯ ಕೇಂದ್ರಕ್ಕೆ ತೆರಳಿ ಪರೀಕ್ಷೆ ಮಾಡಿಸಿಕೊಳ್ಳಬಹುದಾಗಿದೆ ಎಂದು ವಿವರಿಸಿದರು.

ಪರೀಕ್ಷೆಯಲ್ಲಿ ಹೆಚ್‌ಐವಿ ಸೋಂಕು ದೃಢಪಟ್ಟಲ್ಲಿ ಎಆರ್‌ಟಿ ಕೇಂದ್ರಗಳ ಮೂಲಕ ಉಚಿತ ಚಿಕಿತ್ಸೆ ಮತ್ತು ಅಗತ್ಯ ಆರೋಗ್ಯ ಸೇವೆಗಳು ಲಭ್ಯವಿವೆ. ಪರೀಕ್ಷೆ ಹಾಗೂ ಚಿಕಿತ್ಸೆಗೆ ಸಂಬಂಧಿಸಿದ ವ್ಯಕ್ತಿಯ ಎಲ್ಲ ಮಾಹಿತಿಯನ್ನೂ ಸಂಪೂರ್ಣ ಗೌಪ್ಯವಾಗಿ ಇರಿಸಲಾಗುತ್ತದೆ. ಆದ್ದರಿಂದ ಭಯ ಅಥವಾ ಸಂಕೋಚಕ್ಕೆ ಒಳಗಾಗದೆ ಆರೋಗ್ಯ ಸೇವೆಗಳನ್ನು ಪಡೆದುಕೊಳ್ಳಬೇಕು ಎಂದು ಡಾ. ನಂದಿತಾ ಎಂ.ಎನ್. ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಯಶೋಧಾ, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ. ಶಿವಕುಮಾರ್, ಜಿಲ್ಲಾ ಡಿವಿಬಿಡಿಸಿಪಿ ಅಧಿಕಾರಿ ಡಾ. ಚಂದ್ರಶೇಖರಯ್ಯ ಸ್ವಾಮಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್. ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಡ್ಯಾಪ್ಕೋ ಮೇಲ್ವಿಚಾರಕ ಮಲ್ಲಯ್ಯ ಮಠಪತಿ, ಡಿಪಿಎಂ ನವೀನ್ ಕುಮಾರ್, ಸಿಪಿಒ ಬಸವರಾಜಪ್ಪಗೌಡ, ಬಿಹೆಚ್ ಇಒ ನಾಗರಾಜ್ ಜಗತಾಪ್, ಹೆಚ್‌ಐಒ ಸುರೇಶ್ ಬಂಡಾರಿ, ಅಮರೇಶ ಗಡ್ಡಿ, ಸುರೇಶ್, ರಾಜಶೇಖರ್ ಸೇರಿದಂತೆ ಆಶಾ ಕಾರ್ಯಕರ್ತೆಯರು, ಶ್ರೀ ಆದಿಶಕ್ತಿ ಸಾಂಸ್ಕೃತಿಕ ಬೀದಿ ನಾಟಕ ತಂಡ ಗೋವನಕೊಪ್ಪದ ಕಲಾವಿದರು ಹಾಗೂ ಇತರರು ಉಪಸ್ಥಿತರಿದ್ದರು.

## ನಗರದ ವಿವಿಧ ವಾರ್ಡ್‌ಗಳಿಗೆ ಜಿಲ್ಲಾಧಿಕಾರಿ ಪೂವಿತಾ ಎಸ್.,ಪಾಲಿಕೆ ಆಯುಕ್ತ ಜುಬಿನ್ ಮೊಹೊಪಾತ್ರ ಭೇಟಿ, ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ



ರಾಯಚೂರು ಸೆಪ್ಟಂಬರ್ 01 (ಕರ್ನಾಟಕ ವಾರ್ತೆ): ಜಿಲ್ಲಾಧಿಕಾರಿ ಪೂವಿತಾ ಎಸ್. ಹಾಗೂ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮೊಹೊಪಾತ್ರ ಅವರು ಆಗಸ್ಟ್ 31ರ ಸೋಮವಾರ ದಂದು ರಾಯಚೂರು ನಗರದ ವಿವಿಧ ವಾರ್ಡ್‌ಗಳಿಗೆ ಭೇಟಿ ನೀಡಿ, ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲನೆ ನಡೆಸಿದರು.

ಮೊದಲು ರಾಯಚೂರು ನಗರದ ವಾರ್ಡ್ 19 ಹಾಗೂ 20ರಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣ, ನೂತನ ಓವರ್‌ಹೆಡ್ ವಾಟರ್ ಟ್ಯಾಂಕ್ ನಿರ್ಮಾಣ ಹಾಗೂ ಸಾರ್ವಜನಿಕ ಶೌಚಾಲಯಗಳ ನಿರ್ಮಾಣ/ಅಭಿವೃದ್ಧಿ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಲಾಯಿತು. ಕಾಮಗಾರಿಗಳ ಪ್ರಸ್ತುತ ಸ್ಥಿತಿ, ಗುಣಮಟ್ಟ ಹಾಗೂ ಸಾರ್ವಜನಿಕರಿಗೆ ದೊರೆಯುವ ಸೌಲಭ್ಯಗಳ ಕುರಿತು ಸಂಬಧಿಸಿದ ಅಧಿಕಾರಿಗಳಿಂದ ಮಾಹಿತಿ ಪಡೆಯಲಾಯಿತು.

ನಗರದ ನಾಗರಿಕರಿಗೆ ಶುದ್ಧ ಕುಡಿಯುವ ನೀರು, ಸ್ವಚ್ಛತೆ, ನೈರ್ಮಲ್ಯ ಹಾಗೂ ಮೂಲಭೂತ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸುವ ಕಾಮಗಾರಿಗಳಿಗೆ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಅಭಿವೃದ್ಧಿ ಕಾಮಗಾರಿಗಳು ನಿಗದಿತ ತಾಂತ್ರಿಕ ಹಾಗೂ ಗುಣಮಟ್ಟದ ಮಾನದಂಡಗಳಿಗೆ ಅನುಗುಣವಾಗಿ ಕಾಲಮಿತಿಯೊಳಗೆ ಪೂರ್ಣಗೊಳ್ಳುವಂತೆ ಸಂಬಧಿಸಿದ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ನಗರ ಸ್ವಚ್ಛತೆ ಹಾಗೂ ನೈರ್ಮಲ್ಯ ಕಾಪಾಡುವಲ್ಲಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರು ಮತ್ತು ಸ್ವಚ್ಛತಾ ಸಿಬ್ಬಂದಿಯ ಸೇವೆಯನ್ನು ಜಿಲ್ಲಾಧಿಕಾರಿಗಳಿಂದ ಶ್ಲಾಘಿಸಲಾಯಿತು.

ಸಾರ್ವಜನಿಕ ಆರೋಗ್ಯ ಹಾಗೂ ಸ್ವಚ್ಛ ನಗರ ಪರಿಸರ ನಿರ್ಮಾಣದಲ್ಲಿ ಅವರ ಸೇವೆ ಮಹತ್ವದ್ದಾಗಿದೆ. ರಾಯಚೂರು ನಗರದ ಸಮಗ್ರ ಹಾಗೂ ಸುಸ್ಥಿರ ಅಭಿವೃದ್ಧಿಗಾಗಿ ಸಂಬಧಿಸಿದ ಇಲಾಖೆಗಳು, ಸ್ಥಳೀಯ ಸಂಸ್ಥೆಗಳು ಮತ್ತು ಸಾರ್ವಜನಿಕರ ಸಹಭಾಗಿತ್ವದೊಂದಿಗೆ ಅಗತ್ಯ ಕ್ರಮಗಳನ್ನು ನಿರಂತರವಾಗಿ ಕೈಗೊಳ್ಳಬೇಕೆಂದು ಸಂಬಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಇದೇ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಜೋನಲ್-01ರ ಆಯುಕ್ತ ಮಲ್ಲಿಕಾರ್ಜುನ, ಪರಿಸರ ವಿಭಾಗದ ಇಇ ಜೈಪಾಲರೆಡ್ಡಿ ಸೇರಿದಂತೆ ವಿವಿಧ ವಿಭಾಗದ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

## ಹುಲಿಗೆಮ್ಮ ದೇವಸ್ಥಾನದಲ್ಲಿನ ಅವ್ಯವಸ್ಥೆ, ಅಶುಚಿತ್ವ ಕಂಡು ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಸಚಿವ ಕೆ.ಎಸ್.ಬಸವಂತಪ್ಪ



ಕೊಪ್ಪಳ ಸೆಪ್ಟೆಂಬರ್ 01 (ಕರ್ನಾಟಕ ವಾರ್ತೆ): ಕೊಪ್ಪಳ ಜಿಲ್ಲೆಯ ಪ್ರವಾಸದಲ್ಲಿದ್ದ ಮುಜರಾಯಿ, ಮೀನುಗಾರಿಕೆ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರಾದ ಕೆ.ಎಸ್.ಬಸವಂತಪ್ಪ ಅವರು ಸೆಪ್ಟೆಂಬರ್ 1ರಂದು ಕೊಪ್ಪಳ ತಾಲೂಕಿನ ಹುಲಿಗಿಯ ಶ್ರೀ ಹುಲಿಗೆಮ್ಮ ದೇವಸ್ಥಾನಕ್ಕೆ ಭೇಟಿ ನೀಡಿ ಶ್ರೀ ಹುಲಿಗೆಮ್ಮ ದೇವಿಯ ದರ್ಶನ ಪಡೆದ ಬಳಿಕ ದೇವಸ್ಥಾನದ ಸ್ಥಿತಿಗತಿ ಮತ್ತು ಆಡಳಿತ ಕಾರ್ಯ ವ್ಯವಸ್ಥೆಯ ಬಗ್ಗೆ ಖುದ್ದು ಪರಿಶೀಲಿಸಿದರು.

ಸಂಸದರಾದ ಕೆ ರಾಜಶೇಖರ ಹಿಟ್ನಾಳ ಅವರೊಂದಿಗೆ ದೇವಸ್ಥಾನದ ಆವರಣದಲ್ಲಿ 1 ಗಂಟೆ ಕಾಲ ವಿವಿಧೆಡೆ ಬಿರುಸಿನ ಸಂಚಾರ ನಡೆಸಿದ ಸಚಿವರು, ದೇವಸ್ಥಾನ ಆವರಣದ ಎಲ್ಲ ಕಡೆಗಳಲ್ಲೂ ಕಣ್ಣಿಗೆ ಅಶುಚಿತ್ವ ಕಾಣುತ್ತಿದೆ. ನಿಮ್ಮ ಕಾರ್ಯವೈಖರಿ ಸರಿಯಿಲ್ಲ, ದೇವಸ್ಥಾನ ನಿರ್ವಹಣೆಯನ್ನು ಸರಿಯಾಗಿ ಮಾಡುತ್ತಿಲ್ಲ ಎಂದು ದೇವಸ್ಥಾನದ ಆಡಳಿತ ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿಯ ಬೇಜವಾಬ್ದಾರಿಯ ಕಾರ್ಯವೈಖರಿ ಬಗ್ಗೆ ತೀವ್ರ ಅಸಮಧಾನ ವ್ಯಕ್ತಪಡಿಸಿದರು.

ಪವಿತ್ರವಾದ ದೇವರ ಸೇವೆಯಲ್ಲಿ ನಾವಿದ್ದೇವೆ. ಇದು ದೇವಸ್ಥಾನದ ಆವರಣ. ಹುಲಿಗೆಮ್ಮ ತಾಯಿಯ ಪವಿತ್ರ ಸ್ಥಾನವಿದು, ಇಲ್ಲಿಗೆ ನಿತ್ಯ ಸಾವಿರಾರು ಭಕ್ತರು ಬರುತ್ತಾರೆ. ಅವರಿಗೆ ಅನುಕೂಲ ಮಾಡಬೇಕು ಎಂದು ನಿಮಗೆ ಅನ್ನಿಸುವುದಿಲ್ಲವೇ? ಎಲ್ಲಾ ಕಡೆಗೆ ಅಶುಚಿತ್ವ ವ್ಯವಸ್ಥೆ ಹಾಗೆಯೇ ಇರಬೇಕೆ? ಎಂದು ದೇವಸ್ಥಾನದ ಆಡಳಿತ ಅಧಿಕಾರಿ ಎಂ.ಎಚ್. ಪ್ರಕಾಶರಾವ್ ಮತ್ತು ಆಡಳಿತ ಕಚೇರಿಯ ಸಿಬ್ಬಂದಿಯನ್ನು ಪ್ರಶ್ನಿಸಿ ತರಾಟೆ ತೆಗೆದುಕೊಂಡರು.

ದೇವಸ್ಥಾನ ಆವರಣದಲ್ಲಿನ ದಾಸೋಹ ಭವನದ ಪಕ್ಕದಲ್ಲಿನ ಚರಂಡಿಯಲ್ಲಿ ಮುಸುರಿ ಬಿದ್ದಿರುವುದನ್ನು ಮತ್ತು ಪಾಚಿ ಗಟ್ಟಿರುವುದನ್ನು ನೋಡಿದ ಸಚಿವರು, ದೇವಸ್ಥಾನದ ಆವರಣದಲ್ಲಿನ ಎಲ್ಲ ಗಟಾರುಗಳಲ್ಲಿ ನೀರು ನಿಂತು ಪಾಚಿಗಟ್ಟುವವರೆಗೆ ನೀವು ಏನು ಮಾಡುವುದಿಲ್ಲವೇ ಎಂದು ಕೇಳಿದರು. ಭಕ್ತರಿಗೆ ಬಾಡಿಗೆ ಕೊಡುವ ಕೊಠಡಿಗಳ ಸ್ಥಿತಿಗತಿ ಮತ್ತು ಕೊಠಡಿಗಳ ಸುತ್ತಲು ಅಲ್ಲಲ್ಲಿ ಅಶುಚಿತ್ವ ಇರುವುದನ್ನು ನೋಡಿದ ಸಚಿವರು, ದೇವಸ್ಥಾನದ ಆಡಳಿತ ಕಚೇರಿಯ ಅಧಿಕಾರಿ ಮತ್ತು ಸಿಬ್ಬಂದಿಗೆ ಕಾರ್ಯವೈಖರಿಯ ಬಗ್ಗೆ ತೀವ್ರ ಬೇಸರ ವ್ಯಕ್ತಪಡಿಸಿದರು.

ಹರಾಜು ಮಾಡದ್ದಕ್ಕೆ ತರಾಟೆ: ಭಕ್ತರು ದೇವಸ್ಥಾನಕ್ಕೆ ಕಾಣಿಕೆಯಾಗಿ ಸೀರೆ, ಕೊಬರಿ, ಉತ್ತತ್ತಿ ಸೇರಿದಂತೆ ಪೂಜಾ ಸಾಮಗ್ರಿ ನೀಡುವ ಕೊಠಡಿಯ ಸ್ಥಿತಿಗತಿಯನ್ನು ಸಚಿವರು ಖುದ್ದು ನೋಡಿದರು. ಸೀರೆ, ಕೊಬರಿ, ಉತ್ತತ್ತಿ ಇರುವ ಅರಿವೆ ಗಂಟುಗಳನ್ನು ಒಂದೆಡೆ ಕೂಡಿ ಹಾಕಿ ಅವು ಕೊಳೆಯುತ್ತಿರುವುದನ್ನು ಕಂಡು ಸಿಡಿಮಿಡಿಗೊಂಡ ಸಚಿವರು, ಕಡು ಬಡವರಿಗೆ ಕೆಲವೊಮ್ಮೆ ಹೊಸ ಸೀರೆ ಖರೀದಿಸಲು, ಕೊಬ್ಬರಿ ತಿನ್ನಲು ಆಗುವುದಿಲ್ಲ. ದೈವಭಕ್ತಿ ದೊಡ್ಡದೆಂದು ಅವರು ಕೊಟ್ಟಿರುವ ಸೀರೆ, ಕೊಬ್ಬರಿ ಉತ್ತತ್ತಿಯನ್ನು ನೀವು ಹೀಗೆ ಒಂದೆಡೆ ಕೂಡಿ ಹಾಕಿ ಅವುಗಳನ್ನು ಕೊಳೆಯುವಂತೆ ಮಾಡುವುದು ಸರಿ ಕಾಣುತ್ತದೆಯೇ ಎಂದು ದೇವಸ್ಥಾನದ ಆಡಳಿತ ಅಧಿಕಾರಿ ಪ್ರಕಾಶರಾವ್ ಅವರಿಗೆ ಸಚಿವರು ಪ್ರಶ್ನಿಸಿದರು. ನಿಯಮಾನುಸಾರ ಟೆಂಡರ್ ಪ್ರಕ್ರಿಯೆ ನಡೆಸಿ, ಭಕ್ತರು ದೇವಸ್ಥಾನಕ್ಕೆ ನೀಡಿದ ಪೂಜಾ ಸಾಮಗ್ರಿ ಸೀರೆ, ಕೊಬ್ಬರಿ, ಉತ್ತತ್ತಿ ಮತ್ತು ಇನ್ನಿತರ ಪೂಜಾ ಸಾಮಗ್ರಿಗಳನ್ನು ನಿಯಮಾನುಸಾರ ವಿಲೇವಾರಿ ಮಾಡಲು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಶೌಚಾಲಯ ನಿರ್ವಹಣೆಗೆ ಸ್ಥಳೀಯರನ್ನು ನೇಮಿಸಿ: ದೇವಸ್ಥಾನ ಆವರಣದಲ್ಲಿನ ಶೌಚ ಗೃಹಗಳ ವ್ಯವಸ್ಥೆಯನ್ನು ಸಹ ಸಚಿವರು ನೋಡಿದರು. ಶೌಚಾಲಯ ನಿರ್ವಹಣೆ ನೆಪದಲ್ಲಿ ಭಕ್ತರಿಂದ ಹಣ ಕೀಳಬಾರದು. ಪ್ರಾಮಾಣಿಕವಾಗಿ ಕೆಲಸ ಮಾಡುವ ಉತ್ತಮವಾಗಿ ನಿರ್ವಹಣೆ ಮಾಡುವ ವ್ಯಕ್ತಿಗಳಿಗೆ ಶೌಚಾಲಯಗಳ ನಿರ್ವಹಣೆ ಜವಾಬ್ದಾರಿ ನೀಡಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಭಕ್ತರು ಪಾದರಕ್ಷೆ ಬಿಡುವ ಕೌಂಟರಗೆ ಆಗಮಿಸಿದ ಸಚಿವರು, ಪಾದರಕ್ಷೆ ಕೌಂಟರನಲ್ಲಿ

ಭಕ್ತರಿಂದ ಹೆಚ್ಚಿನ ಹಣ ಪಡೆಯಬಾರದು. ಕಡು ಬಡವರು ಕೆಲವೊಮ್ಮೆ ಹಣವಿಲ್ಲ ಎಂದು ಹೇಳಿದಾಗ ಅಂತವರಿಗೆ ವಿನಾಯಿತಿ ನೀಡಿ ಸಹಕಾರ ನೀಡಬೇಕು ಎಂದು ಅಲ್ಲಿನ ಸಿಬ್ಬಂದಿಗೆ ಸಚಿವರು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ಸುರೇಶ ಇಟ್ನಾಳ, ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರು ಮತ್ತು ಗ್ರಾಮಸ್ಥರು ಇದ್ದರು.

## ರೈತರ ಸಂಕಷ್ಟದ ಬಗ್ಗೆ ಸರ್ಕಾರಕ್ಕೆ ಇನ್ನೂ ಜ್ಞಾನೋದಯವಾದಂತಿಲ್ಲ: ಬಿ.ವೈ. ವಿಜಯೇಂದ್ರ




ಮಸ್ಕಿ : ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ಬಿ. ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿರಬಹುದು. ಆದರೆ ದುರ್ಬಳಕೆಯಾಗಿದೆ ಎನ್ನಲಾದ ಹಣ ಇನ್ನೂ ನಿಗಮದ ಖಾತೆಗೆ ಸಂಪೂರ್ಣವಾಗಿ ವಾಪಸ್ ಬಂದಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.

ಬಳ್ಳಾರಿ ಚಲೋ ಪಾದಯಾತ್ರೆಯ ಸಂದರ್ಭದಲ್ಲಿ ಮಾತನಾಡಿದ ಅವರು, ರಾಜ್ಯದ ರೈತರು ತೀವ್ರ ಬರಗಾಲದಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ. 200ಕ್ಕೂ ಹೆಚ್ಚು ತಾಲೂಕುಗಳಲ್ಲಿ ಬರ ಪರಿಸ್ಥಿತಿ ಗಂಭೀರವಾಗಿದ್ದರೂ ಸರ್ಕಾರ ಕೇವಲ 101 ತಾಲೂಕುಗಳನ್ನು ಮಾತ್ರ ಬರಪೀಡಿತ ಎಂದು ಘೋಷಿಸಿದೆ. ರೈತರು ಯಾವ ರೀತಿಯ ಸಂಕಷ್ಟ ಎದುರಿಸುತ್ತಿದ್ದಾರೆ ಎಂಬ ವಾಸ್ತವಿಕ ಪರಿಸ್ಥಿತಿಯ ಬಗ್ಗೆ ಮುಖ್ಯಮಂತ್ರಿ ಹಾಗೂ ಸಚಿವ ಸಂಪುಟಕ್ಕೆ ಇನ್ನೂ ಜ್ಞಾನೋದಯವಾದಂತಿಲ್ಲ ಎಂದು ಟೀಕಿಸಿದರು.

ಲಿಂಗಸುಗೂರು, ರಾಯಚೂರು ಸೇರಿದಂತೆ ಉತ್ತರ ಕರ್ನಾಟಕದ ಹಲವು ಭಾಗಗಳಲ್ಲಿ ಒಂದು ಸಾವಿರ ಅಡಿ ಆಳದವರೆಗೆ ಕೊಳವೆಬಾವಿ ಕೊರೆದರೂ ನೀರು ಸಿಗದ ಪರಿಸ್ಥಿತಿ ಇದೆ. ಇಂತಹ ಸಂಕಷ್ಟದ ಸಂದರ್ಭದಲ್ಲಿಯೂ ರೈತರಿಗೆ ಸಮರ್ಪಕ ಬರ ಪರಿಹಾರ ನೀಡಿಲ್ಲ ಎಂದು ಅವರು ಆರೋಪಿಸಿದರು.

ಪ್ರತಿ ಸಮಸ್ಯೆಗೂ ಕೇಂದ್ರ ಸರ್ಕಾರದತ್ತ ಬೆರಳು ತೋರಿಸುವುದರಿಂದ ರಾಜ್ಯ ಸರ್ಕಾರ ತನ್ನ ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ರಾಜ್ಯದ ರೈತರ ಸಂಕಷ್ಟಕ್ಕೆ ಸ್ಪಂದಿಸಿ ತಕ್ಷಣ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ವಿಜಯೇಂದ್ರ ಒತ್ತಾಯಿಸಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ದುರ್ಬಳಕೆ, ರೈತರ ಸಮಸ್ಯೆಗಳು, ಮಹಿಳೆಯರ ಮೇಲಿನ ಅನ್ಯಾಯ, ಯುವಜನತೆಗೆ ಉದ್ಯೋಗದ ಕೊರತೆ ಹಾಗೂ ರಾಜ್ಯದಲ್ಲಿ ನಡೆಯುತ್ತಿದೆ ಎನ್ನಲಾದ ಭ್ರಷ್ಟಾಚಾರದ ವಿರುದ್ಧ ಬಿಜೆಪಿ ಹೋರಾಟ ಮುಂದುವರಿಸಲಿದೆ ಎಂದು ಹೇಳಿದರು.

ಕಾಂಗ್ರೆಸ್ ಸರ್ಕಾರ ಜನವಿರೋಧಿ, ರೈತವಿರೋಧಿ ಹಾಗೂ ದಲಿತವಿರೋಧಿ ನೀತಿಗಳನ್ನು ಅನುಸರಿಸುತ್ತಿದೆ ಎಂದು ಆರೋಪಿಸಿದ ಅವರು, ಇಂತಹ ಸರ್ಕಾರವನ್ನು ಅಧಿಕಾರದಿಂದ ಕೆಳಗಿಳಿಸುವ ಸಂಕಲ್ಪವನ್ನು ಬಿಜೆಪಿ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಮಾಡಬೇಕಾಗಿದೆ ಎಂದು ಕರೆ ನೀಡಿದರು.

ಪಾದಯಾತ್ರೆಯ ಮೊದಲ ದಿನ ಯಶಸ್ವಿಯಾಗಿ ನಡೆಯಲು ಸಹಕರಿಸಿದ ಪಕ್ಷದ ಹಿರಿಯ ನಾಯಕರು, ಜಿಲ್ಲಾಧ್ಯಕ್ಷರು, ಶಾಸಕರು, ಮಾಜಿ ಶಾಸಕರು, ಮಾಜಿ ಸಚಿವರು, ಸಂಸದರು, ಮಾಜಿ ಸಂಸದರು ಹಾಗೂ ಕಾರ್ಯಕರ್ತರಿಗೆ ವಿಜಯೇಂದ್ರ ಅಭಿನಂದನೆ ಸಲ್ಲಿಸಿದರು.

## ಅರೇಕಾಲಿಕ ಸ್ವಯಂ ಸೇವಕರಿಗೆ ಎರಡು ದಿನಗಳ ಪುನಶ್ಚೇತನ ತರಬೇತಿ ಕಾರ್ಯಗಾರಕ್ಕೆ ನ್ಯಾ. ಮಾಲಾ ಎನ್.ಡಿ. ಅವರಿಂದ ಚಾಲನೆ



ರಾಯಚೂರು ಸೆಪ್ಟಂಬರ್ 01 (ಕರ್ನಾಟಕ ವಾರ್ತೆ): ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಇವರ ಆದೇಶದ ಮೇರೆಗೆ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ರಾಯಚೂರು, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರಾಯಚೂರು, ಔಟ್ ಲಾಡ್ ಇಂಡಿಯಾ ಸಂಸ್ಥೆ ಬೆಂಗಳೂರು ಮತ್ತು ನ್ಯಾಯ ವಿಧಿ ಕೇಂದ್ರ ಇವರುಗಳ ಸಂಯಕ್ತಾಶ್ರಯದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ತಾಲ್ಲೂಕು ಕಾನೂನು ಸೇವಾ ಸಮಿತಿಯ ಸ್ವಯಂ ಸೇವಕರಿಗಳಿಗೆ ಹಮ್ಮಿಕೊಳ್ಳಲಾಗಿದ್ದ 2 ದಿನಗಳ ಪುನಶ್ಚೇತನ ತರಬೇತಿ ಕಾರ್ಯಗಾರಕ್ಕೆ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗೌರವಾನ್ವಿತರು ಶ್ರೀಮತಿ.ಮಾಲಾ ಎನ್.ಡಿ., ಅವರು ಚಾಲನೆ ನೀಡಿದರು.

1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗೌರವಾನ್ವಿತರು ಶ್ರೀಮತಿ. ಮಾಲಾ ಎನ್.ಡಿ., ಅವರು ಮಾತನಾಡಿ, ಮಕ್ಕಳ ಮೇಲಿನ ಅಪರಾಧಗಳಿಗೆ ಸಂಬಧಿಸಿದ ಕಾನೂನುಗಳ ಬಗ್ಗೆ ಹಾಗೂ ಪೋಸ್ಕೋ ಕಾಯ್ದೆಯ ಬಗ್ಗೆ ಹಾಗೂ ಎಲ್ಲಾ ಪಾಲುದಾರರ ನಡುವೆ ಇಲಾಖೆಗಳ ನಡುವಿನ ಸಮನ್ವಯಗಳ ಕುರಿತು ವಿವರವಾಗಿ ಮಾಹಿತಿ ನೀಡಿದರು.

ಈ ವೇಳೆ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ಮಾತನಾಡಿ, ಎನ್‌ಎಲ್‌ಎಸ್‌ಎ ಯೋಜನೆಗಳ ಬಗ್ಗೆ ಮತ್ತು ಅವುಗಳ ಸದುಪಯೋಗಗಳ ಕುರಿತು ವಿವರವಾಗಿ ತಿಳಿಸಿದರು.

ಕಾರ್ಯಗಾರವು ಆಗಸ್ಟ್ 31ರಿಂದ ಸೆಪ್ಟಂಬರ್ 01ರವರೆಗೆ ನಡೆಯಿತು. ಕಾರ್ಯಾಗಾರದಲ್ಲಿ ಔಟ್ ಲಾಡ್ ಇಂಡಿಯಾ ಸಂಸ್ಥೆ ಅವರು ಮತ್ತು ನ್ಯಾಯ ವಿಧಿ ಕೇಂದ್ರ ಇವರುಗಳ ಎನ್‌ಎಲ್‌ಎಸ್‌ಎ ಸಂಯೋಜಿತ ಎನ್‌ಜಿಒ ಅಡಿಯಲ್ಲಿ ಕಾನೂನು ನೆರವು ಸ್ವಯಂಸೇವಕರ ಪಾತ್ರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸಂಬಧಿಸಿದ ಕಾನೂನುಗಳು, ವರದಕ್ಷಿಣೆ ಮತ್ತು ಕೌಟುಂಬಿಕ ದೌರ್ಜನ್ಯ, ವಿಚ್ಛೇದನ ಮತ್ತು ಜೀವನಾಂಶ, ಲೈಂಗಿಕ ಕಿರುಕುಳ ಬಗ್ಗೆ ವಿವರವಾಗಿ ತಿಳಿಸಿದರು.

ನಂತರ ಸಾರಿಗೆ ಇಲಾಖೆ ಮತ್ತು ಪೊಲೀಸ್ ಇಲಾಖೆಯವರು ಸಂಬಧಪಟ್ಟ ವಿಷಯದ ಬಗ್ಗೆ ಮಾಹಿತಿ ತಿಳಿಸಿದರು.

## ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರ ಅಧ್ಯಕ್ಷತೆಯಲ್ಲಿ ಸಭೆ ಸೆ. 3ಕ್ಕೆ: ರೆಡ್ಡಿ ಶ್ರೀನಿವಾಸ

ಕೊಪ್ಪಳ ಸೆಪ್ಟೆಂಬರ್ 01 (ಕರ್ನಾಟಕ ವಾರ್ತೆ): ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ಮಾಜಿ ಸಚಿವರಾದ ಪಿ.ಟಿ.ಪರಮೇಶ್ವರ ನಾಯ್ಕ ಅವರ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 03 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತಿಯ ಜೆ.ಎಚ್.ಪಟೇಲ್ ಸಭಾಂಗಣದಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷರು ಮತ್ತು ಇತರೆ ಪದಾಧಿಕಾರಿಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸಭೆ ಹಮ್ಮಿಕೊಳ್ಳಲಾಗಿದೆ.

ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು, ಸದಸ್ಯರು ಹಾಗೂ ಎಲ್ಲ ತಾಲ್ಲೂಕುಗಳ ಅಧ್ಯಕ್ಷರು ಮತ್ತು ಇತರೆ ಪದಾಧಿಕಾರಿಗಳು ಸಭೆಯಲ್ಲಿ ಪಾಲ್ಗೊಳ್ಳಬೇಕು. ಪಂಚ ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದಂತೆ ಜಿಲ್ಲೆಯ ಎಲ್ಲ ಅನುಷ್ಠಾನಾ ಇಲಾಖೆಗಳ ಅಧಿಕಾರಿಗಳು ಸೂಕ್ತ ಮಾಹಿತಿಯೊಂದಿಗೆ ಕಡ್ಡಾಯವಾಗಿ ಈ ಸಭೆಗೆ ಹಾಜರಾಗಬೇಕು ಎಂದು ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಟ್ಟಡ ಕಾರ್ಮಿಕರಿಗೆ ಸರ್ಕಾರದ ಸೌಲಭ್ಯಗಳ ಕುರಿತು ಜಾಗೃತಿ




ಸಿಂಧನೂರು: ಪ್ರಗತಿಪರ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಯೂನಿಯನ್ ವತಿಯಿಂದ ಸೆ.1ರಂದು ಸಿಂಧನೂರಿನಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಸರ್ಕಾರದಿಂದ ದೊರೆಯುವ ವಿವಿಧ ಸೌಲಭ್ಯಗಳ ಕುರಿತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಲಭ್ಯವಿರುವ ಮದುವೆ ಸಹಾಯಧನ, ಹೆರಿಗೆ ಸಹಾಯಧನ, ಮರಣ ಪರಿಹಾರ, ವೈದ್ಯಕೀಯ ಸಹಾಯಧನ, ಮಕ್ಕಳ ಶೈಕ್ಷಣಿಕ ಸಹಾಯಧನ, ಅಪಘಾತ ಪರಿಹಾರ ಹಾಗೂ ಪಿಂಚಣಿ ಸೇರಿದಂತೆ ವಿವಿಧ ಸೌಲಭ್ಯಗಳ ಕುರಿತು ಮಾಹಿತಿ ನೀಡಲಾಯಿತು.

ಕಾರ್ಮಿಕರು ಸರ್ಕಾರದ ಸೌಲಭ್ಯಗಳನ್ನು ಪಡೆಯಲು ತಮ್ಮ ಕಾರ್ಮಿಕರ ನೋಂದಣಿಯನ್ನು ನಿಯಮಾನುಸಾರ ಪ್ರತಿ ವರ್ಷ ನವೀಕರಿಸಿಕೊಳ್ಳಬೇಕು. ಅಗತ್ಯ ದಾಖಲೆಗಳನ್ನು ಸರಿಯಾಗಿ ಸಲ್ಲಿಸಿ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ದೊರೆಯುವ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮುಖಂಡರು ತಿಳಿಸಿದರು.

ಕಾರ್ಮಿಕರು ತಮ್ಮ ಹಕ್ಕುಗಳು ಮತ್ತು ಸರ್ಕಾರದ ವಿವಿಧ ಕಲ್ಯಾಣ ಯೋಜನೆಗಳ ಕುರಿತು ಅರಿವು ಹೊಂದುವುದು ಅಗತ್ಯವಾಗಿದ್ದು, ಅರ್ಹ ಕಾರ್ಮಿಕರು ಯಾವುದೇ ಸೌಲಭ್ಯಗಳಿಂದ ವಂಚಿತರಾಗದಂತೆ ಸಂಘಟನೆಯ ಮೂಲಕ ಮಾಹಿತಿ ಹಾಗೂ ಮಾರ್ಗದರ್ಶನ ನೀಡಲಾಗುವುದು ಎಂದು ತಿಳಿಸಲಾಯಿತು.

ಈ ಸಂದರ್ಭದಲ್ಲಿ ಸಿಂಧನೂರು ತಾಲೂಕು ಅಧ್ಯಕ್ಷ ಹನುಮೇಶ, ಮಾನ್ವಿ ತಾಲೂಕು ಅಧ್ಯಕ್ಷ ಬಿ. ಸುದಾನಂದ, ರಾಯಚೂರು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ. ತಿಮ್ಮಪ್ಪ, ಸಿರವಾರ ತಾಲೂಕಿನ ರಮೇಶ ಸೇರಿದಂತೆ ಸಂಘಟನೆಯ ಮುಖಂಡರು ಹಾಗೂ ಸಿಂಧನೂರು ತಾಲೂಕಿನ 50ಕ್ಕೂ ಹೆಚ್ಚು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಭಾಗವಹಿಸಿದ್ದರು.

## ಬೇಡಿಕೆ ಈಡೇರದಿದ್ದರೆ ಸೆ.17ರಂದು ಸಾತ್ ಮೈಲ್ ವೃತ್ತದಲ್ಲಿ ಹೆದ್ದಾರಿ ತಡೆ: ಪಿ ತಿಪ್ಪಣ್ಣ ಬಾಗಲವಾಡ




ಮಾನ್ವಿ: ಜಿಲ್ಲೆಯಲ್ಲಿ ದಲಿತ ಸಮುದಾಯದ ಕು. ಅಶ್ವಿನಿ ಹೊಕ್ರಾಣಿ, ರಾಣೆಮ್ಮ ಅವರ ಅತ್ಯಾಚಾರ-ಕೊಲೆ ಹಾಗೂ ಭೂಮಾನಂದ ಅವರ ಹತ್ಯೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಸರ್ಕಾರ ನೀಡಿರುವ ಭರವಸೆಗಳನ್ನು ನಿಗದಿತ ಅವಧಿಯಲ್ಲಿ ಈಡೇರಿಸದಿದ್ದರೆ ಸೆಪ್ಟೆಂಬರ್ 17ರಂದು ರಾಯಚೂರು ನಗರದ ಸಾತ್ ಮೈಲ್ ವೃತ್ತದ ಬಳಿ ಹೆದ್ದಾರಿ ತಡೆದು ಬೃಹತ್ ಹೋರಾಟ ನಡೆಸಲಾಗುವುದು ಎಂದು ಕು. ಅಶ್ವಿನಿ ಹೊಕ್ರಾಣಿ, ಭೂಮಾನಂದ, ರಾಣೆಮ್ಮ ಅತ್ಯಾಚಾರ-ಕೊಲೆ ಹಾಗೂ ದೌರ್ಜನ್ಯ ವಿರೋಧಿ ಸಂಘಟನೆಗಳ ಒಕ್ಕೂಟದ ರಾಯಚೂರು ಸಂಚಾಲಕ ಪಿ. ತಿಪ್ಪಣ್ಣ ಬಾಗಲವಾಡ ವಕೀಲರು ಎಚ್ಚರಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಗಸ್ಟ್ ತಿಂಗಳೊಂದರಲ್ಲೇ ದಲಿತ ಸಮುದಾಯಕ್ಕೆ ಸೇರಿದ ಕು. ಅಶ್ವಿನಿ ಹೊಕ್ರಾಣಿ, ರಾಣೆಮ್ಮ ಹಾಗೂ ಭೂಮಾನಂದ ಅವರ ಪ್ರಕರಣಗಳು ನಡೆದಿರುವುದು ಅತ್ಯಂತ ಖಂಡನೀಯವಾಗಿದೆ. ಈ ಘಟನೆಗಳನ್ನು ಖಂಡಿಸಿ ಹೊಕ್ರಾಣಿ ಗ್ರಾಮದಲ್ಲಿ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಲಾಗಿತ್ತು ಎಂದು ತಿಳಿಸಿದರು.

ಪ್ರತಿಭಟನೆಗೆ ಸ್ಪಂದಿಸಿದ ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಸಿಂಗ್ ಅವರು ಹೊಕ್ರಾಣಿ ಗ್ರಾಮಕ್ಕೆ ಭೇಟಿ ನೀಡಿ ಸಂತ್ರಸ್ತ ಕುಟುಂಬಗಳಿಗೆ ಸಾಂತ್ವನ ಹೇಳಿ ಮನವಿ ಸ್ವೀಕರಿಸಿದ್ದರು. ಅಲ್ಲದೆ, ಈ ಪ್ರಕರಣಗಳ ಕುರಿತು ಮುಖ್ಯಮಂತ್ರಿ, ಗೃಹ ಸಚಿವರು ಹಾಗೂ ಸಮಾಜ ಕಲ್ಯಾಣ ಸಚಿವರನ್ನು ನಿಯೋಗದೊಂದಿಗೆ ಭೇಟಿ ಮಾಡಿಸಲು ಅವಕಾಶ ಕಲ್ಪಿಸುವುದು, ತಪ್ಪಿತಸ್ಥ ಆರೋಪಿಗಳಿಗೆ ಕಠಿಣ ಶಿಕ್ಷೆ ದೊರಕಿಸಲು ಸರ್ಕಾರದಿಂದ ಅಗತ್ಯ ಕ್ರಮ ಕೈಗೊಳ್ಳುವುದು ಹಾಗೂ ಸಂತ್ರಸ್ತ ಕುಟುಂಬಗಳಿಗೆ ಸರ್ಕಾರದಿಂದ ದೊರೆಯಬೇಕಾದ ಎಲ್ಲ ಸೌಲಭ್ಯಗಳನ್ನು ಒದಗಿಸುವ ಭರವಸೆ ನೀಡಿದ್ದರು ಎಂದು ಹೇಳಿದರು.

ಸಚಿವರ ಭರವಸೆಯ ಹಿನ್ನೆಲೆಯಲ್ಲಿ ಸೆ.2ರಂದು ಹೊಕ್ರಾಣಿಯಲ್ಲಿ ಹಮ್ಮಿಕೊಳ್ಳಲು ಉದ್ದೇಶಿಸಿದ್ದ ಹೆದ್ದಾರಿ ಬಂದ್ ಪ್ರತಿಭಟನೆಯನ್ನು ತಾತ್ಕಾಲಿಕವಾಗಿ ಹಿಂಪಡೆಯಲಾಗಿದೆ. ಆದರೆ ಪ್ರಕರಣಗಳ ತನಿಖೆಯನ್ನು ಸಿಐಡಿ ಅಥವಾ ಎಸ್‌ಐಟಿಗೆ ವಹಿಸಬೇಕು, ಗ್ರಾಮೀಣ ಭಾಗದ ಮಹಿಳೆಯರಿಗೆ ಸಾಮೂಹಿಕ ಹಾಗೂ ವೈಯಕ್ತಿಕ ಶೌಚಾಲಯಗಳನ್ನು ನಿರ್ಮಿಸಬೇಕು ಸೇರಿದಂತೆ ಸಂಘಟನೆ ಮುಂದಿಟ್ಟಿರುವ ಪ್ರಮುಖ ಬೇಡಿಕೆಗಳನ್ನು ಸರ್ಕಾರ ಈಡೇರಿಸಬೇಕು ಎಂದು ಆಗ್ರಹಿಸಿದರು.

ಸರ್ಕಾರ ನೀಡಿದ ಭರವಸೆಗಳನ್ನು ಅನುಷ್ಠಾನಗೊಳಿಸದೆ ವಿಳಂಬ ಮಾಡಿದರೆ ಸೆ.17ರಂದು ರಾಯಚೂರು ಸಾತ್ ಮೈಲ್ ವೃತ್ತದ ಬಳಿ ಹೆದ್ದಾರಿ ತಡೆದು ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಪಿ. ತಿಪ್ಪಣ್ಣ ಬಾಗಲವಾಡ ತಿಳಿಸಿದರು.

ಹಿರಿಯ ದಲಿತ ಮುಖಂಡ ಪ್ರಭುರಾಜ್ ಕೋಡ್ಲಿ ಮಾತನಾಡಿ, ಜಿಲ್ಲೆಯಲ್ಲಿ ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳು ಹೆಚ್ಚಾಗಲು ಅಕ್ರಮ ಮರಳುಗಾರಿಕೆ, ಅಕ್ರಮ ಮದ್ಯ ಮಾರಾಟ, ಜೂಜಾಟ ಸೇರಿದಂತೆ ಕಾನೂನುಬಾಹಿರ ಚಟುವಟಿಕೆಗಳನ್ನು ನಿಯಂತ್ರಿಸುವಲ್ಲಿ ಜಿಲ್ಲಾಡಳಿತ ವಿಫಲವಾಗಿರುವುದೂ ಒಂದು ಕಾರಣವಾಗಿದೆ ಎಂದು ಆರೋಪಿಸಿದರು.

ಜಿಲ್ಲೆಯಲ್ಲಿ ನಡೆಯುತ್ತಿರುವ ಕಾನೂನುಬಾಹಿರ ಚಟುವಟಿಕೆಗಳಿಗೆ ಕಡಿವಾಣ ಹಾಕಬೇಕು ಹಾಗೂ ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ರಾಜ್ಯದ ಗೃಹ ಸಚಿವರಿಗೆ ಮನವಿ ಸಲ್ಲಿಸಲಾಗುವುದು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ದಲಿತಪರ ಮುಖಂಡರಾದ ಕೆ. ನಾಗಲಿಂಗಸ್ವಾಮಿ, ವಿಶ್ವನಾಥರಾಯಪ್ಪ, ಹನುಮಂತಕೋಟೆ, ಹನುಮಂತ ಸೀಕಲ್, ನರಸಪ್ಪ ಜೂಕುರು, ಶಿವರಾಜ ಜಾನೇಕಲ್, ಶಿವರಾಜ ಉಮಳಿಹೊಸೂರು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಜಿಲ್ಲೆಗೆ ಸಚಿವ ಸ್ಥಾನ, ಉಸ್ತುವಾರಿ ನೀಡಲು ಹೋರಾಟಗಾರರ ಆಗ್ರಹ



ರಾಯಚೂರು: ರಾಯಚೂರು ಜಿಲ್ಲೆಗೆ ಸಚಿವ ಸ್ಥಾನ ಹಾಗೂ ಜಿಲ್ಲಾ ಉಸ್ತುವಾರಿ ನೀಡದಿರುವುದು ಜಿಲ್ಲೆಯ ಜನತೆಗೆ ಮಾಡಿರುವ ಅನ್ಯಾಯವಾಗಿದೆ ಎಂದು ಆರೋಪಿಸಿರುವ ವಿವಿಧ ಸಂಘಟನೆಗಳ ಮುಖಂಡರು, ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಸಿಂಗ್ ಅವರಿಗೆ 11 ಪ್ರಶ್ನೆಗಳನ್ನೊಳಗೊಂಡ ಹೋರಾಟಗಾರರ ಪ್ರಶ್ನೆ ಪತ್ರವನ್ನು ಮುಂದಿಟ್ಟಿದ್ದಾರೆ.

ಶಿವರಾಮೇಗೌಡ ಕರ್ನಾಟಕ ರಕ್ಷಣಾ ವೇದಿಕೆಯ ರಾಯಚೂರು ಜಿಲ್ಲಾಧ್ಯಕ್ಷ ಹಾಗೂ ರಾಜ್ಯ ಸಂಘಟನಾ ಕಾರ್ಯದರ್ಶಿ ಅಶೋಕ್ ಕುಮಾರ್ ಸಿ.ಕೆ. ಜೈನ್ ಮತ್ತು ದಲಿತ ಸಂಘಟನೆಗಳ ಒಕ್ಕೂಟ ಹಾಗೂ ಪ್ರಗತಿಪರ ಒಕ್ಕೂಟದ ಅಧ್ಯಕ್ಷ ಎಸ್. ಮಾರೆಪ್ಪ ವಕೀಲರು ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಈ ಪ್ರಶ್ನೆಗಳನ್ನು ಮುಂದಿಟ್ಟಿದ್ದಾರೆ.

ರಾಯಚೂರು ಜಿಲ್ಲೆಗೆ ಸಚಿವ ಸ್ಥಾನ ಹಾಗೂ ಉಸ್ತುವಾರಿ ದೊರೆಯದಿರುವುದನ್ನು ಖಂಡಿಸಿ ಸ್ವಾತಂತ್ರ್ಯೋತ್ಸವದಂದು ಪ್ರತಿಭಟನೆ ನಡೆಸಿದಾಗ ಪೊಲೀಸರು ಹೋರಾಟಗಾರರನ್ನು ಬಂಧಿಸಿ ಪ್ರತಿಭಟನೆಯನ್ನು ಹತ್ತಿಕ್ಕಿದ್ದಾರೆ ಎಂದು ಮುಖಂಡರು ಆರೋಪಿಸಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರಾಗಿ ಡಾ. ಅಜಯ್ ಸಿಂಗ್ ಅವರ ಬಗ್ಗೆ ಅಥವಾ ಅವರ ಸಚಿವ ಖಾತೆಯ ಬಗ್ಗೆ ಯಾವುದೇ ವೈಯಕ್ತಿಕ ವಿರೋಧವಿಲ್ಲ. ಆದರೆ ಜಿಲ್ಲೆಯಲ್ಲಿ ಕಾಂಗ್ರೆಸ್‌ನ ಹಲವು ಚುನಾಯಿತ ಜನಪ್ರತಿನಿಧಿಗಳು ಹಾಗೂ ವಿಧಾನ ಪರಿಷತ್ ಸದಸ್ಯರಿದ್ದರೂ ಜಿಲ್ಲೆಗೆ ಸಚಿವ ಸ್ಥಾನ ನೀಡದಿರುವುದಕ್ಕೆ ಕಾರಣವೇನು ಎಂದು ಪ್ರಶ್ನಿಸಿದ್ದಾರೆ.

ಜಿಲ್ಲೆಯ ಮಾನ್ವಿ, ದೇವದುರ್ಗ ಹಾಗೂ ಲಿಂಗಸುಗೂರು ತಾಲೂಕುಗಳಲ್ಲಿ ದಲಿತರ ಮೇಲೆ ನಡೆದಿವೆ ಎನ್ನಲಾದ ಕೊಲೆ ಹಾಗೂ ದೌರ್ಜನ್ಯ ಪ್ರಕರಣಗಳ ಸಂದರ್ಭ ಮುಖ್ಯಮಂತ್ರಿ, ಗೃಹ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ತಕ್ಷಣ ಭೇಟಿ ನೀಡದಿರುವುದಕ್ಕೂ ಮುಖಂಡರು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ವಿಧಾನಸಭೆ ಅಧಿವೇಶನ ನಡೆಯುತ್ತಿರುವುದರಿಂದ ಭೇಟಿ ಸಾಧ್ಯವಾಗಿಲ್ಲ ಎಂಬ ಕಾರಣವನ್ನು ಅಧಿಕಾರಿಗಳು ನೀಡಿದ್ದರು ಎನ್ನಲಾಗಿದ್ದು, ಇತರ ಖಾಸಗಿ ಹಾಗೂ ವಿಶೇಷ ಕಾರ್ಯಕ್ರಮಗಳಿಗೆ ಸಚಿವರು ಸದನದ ನಡುವೆಯೂ ತೆರಳಿರುವ ಉದಾಹರಣೆಗಳಿವೆ. ಹಾಗಾದರೆ ದೌರ್ಜನ್ಯಕ್ಕೆ ಒಳಗಾದ ಕುಟುಂಬಗಳನ್ನು ಭೇಟಿ ಮಾಡಲು ವಿಳಂಬವಾಗಿದ್ದೇಕೆ ಎಂದು ಪ್ರಶ್ನಿಸಿದ್ದಾರೆ.

ಪದವೀಧರೆ ಅಶ್ವಿನಿ ಅವರ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿ ಚಿತ್ರಹಿಂಸೆ ನೀಡಿ ಕೊಲೆ ಮಾಡಲಾಗಿದೆ ಎನ್ನಲಾದ ಪ್ರಕರಣ, ರಾಣೆಮ್ಮ ಅವರ ಅತ್ಯಾಚಾರ ಮತ್ತು ಕೊಲೆ ಹಾಗೂ ಭೂಮಾನಂದ ಅವರ ಹತ್ಯೆ ಪ್ರಕರಣಗಳನ್ನು ಉಲ್ಲೇಖಿಸಿರುವ ಮುಖಂಡರು, ದಲಿತ ಸಮುದಾಯದವರ ಜೀವಕ್ಕೆ ಸರ್ಕಾರ ಸೂಕ್ತ ರಕ್ಷಣೆ ನೀಡಬೇಕು ಎಂದು ಒತ್ತಾಯಿಸಿದ್ದಾರೆ. ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳ ಹಿನ್ನೆಲೆಯಲ್ಲಿ ರಾಯಚೂರು ಜಿಲ್ಲೆಯನ್ನು ದಲಿತರ ಮೇಲಿನ ದೌರ್ಜನ್ಯಕ್ಕೆ ತುತ್ತಾದ ಜಿಲ್ಲೆಯೆಂದು ಘೋಷಿಸಿ ವಿಶೇಷ ರಕ್ಷಣಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ನಡೆದ ಕೊಲೆ ಪ್ರಕರಣಗಳ ಸಂತ್ರಸ್ತ ಕುಟುಂಬಗಳನ್ನು ಭೇಟಿ ಮಾಡಿ ಸಾಂತ್ವನ ಹೇಳಲು ಜಿಲ್ಲಾ ಉಸ್ತುವಾರಿ ಸಚಿವರು 15ರಿಂದ 20 ದಿನಗಳಷ್ಟು ವಿಳಂಬ ಮಾಡಿದ್ದಾರೆ ಎಂದು ಆರೋಪಿಸಿರುವ ಮುಖಂಡರು, ಈ ವಿಳಂಬದ ಬಗ್ಗೆಯೂ ಉತ್ತರ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ರಾಯಚೂರಿಗೆ ಏಮ್ಸ್ ಮಂಜೂರು ಮಾಡುವಂತೆ ನಡೆಯುತ್ತಿರುವ ಹೋರಾಟ ನಾಲ್ಕು ವರ್ಷಗಳನ್ನು ಪೂರೈಸಿ ಐದನೇ ವರ್ಷಕ್ಕೆ ಕಾಲಿಡುತ್ತಿದೆ. ಸ್ವಾತಂತ್ರ್ಯೋತ್ಸವದ ಸಂದರ್ಭದಲ್ಲಿ ಏಮ್ಸ್ ಹೋರಾಟ ವೇದಿಕೆಗೆ ಭೇಟಿ ನೀಡಿದ್ದ ಡಾ. ಅಜಯ್ ಸಿಂಗ್ ಅವರು ಶೀಘ್ರದಲ್ಲೇ ದೆಹಲಿಗೆ ನಿಯೋಗ ಕರೆದೊಯ್ಯುವುದಾಗಿ ಭರವಸೆ ನೀಡಿದ್ದರು. ಆ ನಿಯೋಗವನ್ನು ಯಾವಾಗ ಕರೆದೊಯ್ಯಲಾಗುತ್ತದೆ ಎಂಬುದನ್ನು ಸ್ಪಷ್ಟಪಡಿಸಬೇಕು ಹಾಗೂ ಶೀಘ್ರದಲ್ಲೇ ದೆಹಲಿಗೆ ನಿಯೋಗ ಕರೆದೊಯ್ಯಲು ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೃಷಿ ಉತ್ಪನ್ನ ಮಾರುಕಟ್ಟೆ ಸೇರಿದಂತೆ ಹಲವು ಇಲಾಖೆಗಳಲ್ಲಿ ಪ್ರಭಾರಿ ಅಧಿಕಾರಿಗಳೇ ಕಾರ್ಯನಿರ್ವಹಿಸುತ್ತಿದ್ದಾರೆ. ಪ್ರಮುಖ ಇಲಾಖೆಗಳಿಗೆ ಪೂರ್ಣಾವಧಿ ಅಧಿಕಾರಿಗಳಿಲ್ಲದಿದ್ದರೆ ಜಿಲ್ಲೆಯ ಅಭಿವೃದ್ಧಿ ಹೇಗೆ ಸಾಧ್ಯ ಎಂದು ಪ್ರಶ್ನಿಸಿದ್ದಾರೆ.

ರಾಜ್ಯದ ಪ್ರತಿಯೊಂದು ಜಿಲ್ಲೆಯಲ್ಲಿಯೂ ರಾಜಕೀಯ ಗುಂಪುಗಾರಿಕೆ ಇರುವುದು ಸಹಜ. ಆದರೆ ರಾಯಚೂರು ಜಿಲ್ಲೆಯಲ್ಲಿನ ರಾಜಕೀಯ ಗುಂಪುಗಾರಿಕೆಯನ್ನೇ ನೆಪ ಮಾಡಿಕೊಂಡು ಜಿಲ್ಲೆಯನ್ನು ಸಚಿವ ಸ್ಥಾನ ಹಾಗೂ ಸೂಕ್ತ ಪ್ರಾತಿನಿಧ್ಯದಿಂದ ವಂಚಿಸಲಾಗುತ್ತಿದೆ ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿದೆ. ಜಿಲ್ಲೆಗೆ ಸಚಿವ ಸ್ಥಾನ ದೊರೆಯುವವರೆಗೆ ವಿವಿಧ ಸಂಘ-ಸಂಸ್ಥೆಗಳ ಹೋರಾಟ ನಿರಂತರವಾಗಿ ಮುಂದುವರಿಯಲಿದೆ ಎಂದು ಎಚ್ಚರಿಸಿದ್ದಾರೆ.

ಈ ಪ್ರಶ್ನೆ ಪತ್ರದಲ್ಲಿರುವ ಅಂಶಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದು ರಾಯಚೂರು ಜಿಲ್ಲೆಗೆ ಸಚಿವ ಸ್ಥಾನ ನೀಡಬೇಕೆಂಬ ಜಿಲ್ಲೆಯ ಸಾರ್ವಜನಿಕರು ಮತ್ತು ಹೋರಾಟಗಾರರ ಬೇಡಿಕೆಯನ್ನು ಸರ್ಕಾರದ ಮಟ್ಟದಲ್ಲಿ ಚರ್ಚಿಸಬೇಕು. ಜಿಲ್ಲೆಯ ಜನರ ಭಾವನೆ ಮತ್ತು ಬೇಡಿಕೆಯನ್ನು ಮುಖ್ಯಮಂತ್ರಿಗಳಿಗೆ ಮನವರಿಕೆ ಮಾಡಿಕೊಡಬೇಕು ಎಂದು ಡಾ. ಅಜಯ್ ಸಿಂಗ್ ಅವರನ್ನು ಒತ್ತಾಯಿಸಿದ್ದಾರೆ.

ರಾಯಚೂರು ಜಿಲ್ಲೆಗೆ ಸಚಿವ ಸ್ಥಾನ ನೀಡದಿರುವುದು ಅನ್ಯಾಯವಾಗಿದೆ ಎಂಬುದನ್ನು ಮುಖ್ಯಮಂತ್ರಿಗಳ ಗಮನಕ್ಕೆ ತರಬೇಕು. ಜಿಲ್ಲೆಯ ಜನರ ಅಸಮಾಧಾನವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಶೀಘ್ರ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಮುಖಂಡರು ಆಗ್ರಹಿಸಿದ್ದಾರೆ.

ಈ ಸಂದರ್ಭದಲ್ಲಿ ದಲಿತ ಮುಖಂಡ ರವೀಂದ್ರನಾಥ ಪಟ್ಟಿ, ಎಂ.ಆರ್. ಭೇರಿ, ರಾಜ್ಯ ದಲಿತ ಮುಖಂಡ ಹೇಮರಾಜ್ ಅಸ್ಕಿಹಾಳ, ಬಹುಜನ ಪಕ್ಷದ ಜಿಲ್ಲಾಧ್ಯಕ್ಷ ಜೈ ಭೀಮ್ ವಲ್ಲಭ, ನಾಗರಿಕ ವೇದಿಕೆ ಅಧ್ಯಕ್ಷ ಅಮರೇಗೌಡ ಪಾಟೀಲ, ವಸಂತ ಅಸ್ಕಿಹಾಳ, ಅಂಜಿನಯ್ಯ, ದೂಳಯ್ಯ, ಜಗನ್, ಲಕ್ಷ್ಮಣ್, ಜಾರ್ಜ್, ಉರಕುಂದು ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಕೆಪಿಎಸ್‌ಸಿ ಹಗರಣದ ಹಿಂದೆ ಬಿಜೆಪಿ ನಾಯಕರ ಕೈವಾಡ: ಡಾ. ರಝಾಕ ಉಸ್ತಾದ ಆರೋಪ



ರಾಯಚೂರು: ಕರ್ನಾಟಕ ಲೋಕಸೇವಾ ಆಯೋಗದಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರ ಮತ್ತು ಹಗರಣಗಳಿಂದ ರಾಜ್ಯದ ಲಕ್ಷಾಂತರ ಯುವಕರಿಗೆ ಅನ್ಯಾಯವಾಗಿದ್ದು, ಈ ಪ್ರಕರಣಗಳ ಹಿಂದೆ ಬಿಜೆಪಿ ನಾಯಕರ ಪ್ರಭಾವ ಇರುವ ಅನುಮಾನಗಳು ಗಂಭೀರವಾಗಿವೆ ಎಂದು ಕೆಪಿಸಿಸಿ ಮಾಧ್ಯಮ ವಿಭಾಗದ ರಾಜ್ಯ ವಕ್ತಾರ ಡಾ. ರಝಾಕ ಉಸ್ತಾದ ಆರೋಪಿಸಿದ್ದಾರೆ.

ಕೆಪಿಎಸ್‌ಸಿ ನೇಮಕಾತಿ ಪ್ರಕ್ರಿಯೆಗಳಲ್ಲಿ ಪಾರದರ್ಶಕತೆ ಕಾಪಾಡಬೇಕಾದ ಸಂಸ್ಥೆಯಲ್ಲೇ ಅಕ್ರಮಗಳು ನಡೆದಿರುವುದು ಖಂಡನೀಯ. ಲಕ್ಷಾಂತರ ಬಡ ಹಾಗೂ ಮಧ್ಯಮ ವರ್ಗದ ಯುವಕರು ರಾತ್ರಿ ಹಗಲು ಶ್ರಮಿಸಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿದ್ದಾರೆ. ಆದರೆ ಅಪ್ರಾಮಾಣಿಕ ಮಧ್ಯವರ್ತಿಗಳು, ಕೆಲವು ಭ್ರಷ್ಟ ಅಧಿಕಾರಿಗಳು ಹಾಗೂ ಪ್ರಭಾವಿ ವ್ಯಕ್ತಿಗಳ ಹಸ್ತಕ್ಷೇಪದಿಂದ ಇಡೀ ಸಂಸ್ಥೆಯ ವಿಶ್ವಾಸಾರ್ಹತೆಗೆ ಧಕ್ಕೆ ಉಂಟಾಗುತ್ತಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ ಅವರು ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ ಆರೋಪಗಳ ಹಿನ್ನೆಲೆಯಲ್ಲಿ ಸರ್ಕಾರ ಅವರನ್ನು ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿದೆ. ಅವರ ಕುಟುಂಬ ಸದಸ್ಯರ ವಿರುದ್ಧವೂ ಸುಳ್ಳು ಆದಾಯ ಪ್ರಮಾಣಪತ್ರ ಸಲ್ಲಿಕೆ ಸಂಬಂಧ ಕ್ರಿಮಿನಲ್ ಪ್ರಕರಣ ದಾಖಲಾಗಿದೆ ಎಂದು ಅವರು ಹೇಳಿದ್ದಾರೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಕೆಲವು ಕೆಪಿಎಸ್‌ಸಿ ಅಧಿಕಾರಿಗಳು ಹಾಗೂ ಬಿಜೆಪಿ ಕಾರ್ಯಕರ್ತರನ್ನು ಸಿಐಡಿ ಪೊಲೀಸರು ಬಂಧಿಸಿದ್ದು, ತನಿಖೆಯನ್ನು ಇನ್ನಷ್ಟು ಆಳವಾಗಿ ನಡೆಸಬೇಕು. ಪ್ರಕರಣದ ಹಿಂದೆ ಯಾರೇ ಪ್ರಭಾವಿ ವ್ಯಕ್ತಿಗಳಿದ್ದರೂ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಬೀದರ್ ಜಿಲ್ಲೆಯ ಬಿಜೆಪಿ ಕಾರ್ಯಕರ್ತ ಬಸವರಾಜ ಕನ್ನಾಳೆ ಈ ಪ್ರಕರಣದ ಪ್ರಮುಖ ಆರೋಪಿ ಎನ್ನಲಾಗುತ್ತಿದ್ದು, ಅವರು ಬಿಜೆಪಿ ಸರ್ಕಾರದ ಅವಧಿಯಲ್ಲಿ ತುಮಕೂರು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾಗಿದ್ದರು ಹಾಗೂ ಬೀದರ್ ಶಾಸಕ ಬೆಲ್ದಾಳೆ ಅವರ ಆಪ್ತ ಸಹಾಯಕರಾಗಿಯೂ ಕಾರ್ಯನಿರ್ವಹಿಸಿದ್ದರು ಎಂದು ಡಾ. ರಝಾಕ ಉಸ್ತಾದ ಆರೋಪಿಸಿದ್ದಾರೆ.

ಅದೇ ರೀತಿ ಶಿವಶಂಕರಪ್ಪ ಸಾಹುಕಾರ ಅವರನ್ನು ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೆಪಿಎಸ್‌ಸಿ ಸದಸ್ಯ ಹಾಗೂ ನಂತರ ಅಧ್ಯಕ್ಷರನ್ನಾಗಿ ನೇಮಿಸಲಾಗಿತ್ತು. ಈ ಹಿನ್ನೆಲೆಗಳಲ್ಲಿ ಹಗರಣದ ಹಿಂದಿರುವ ರಾಜಕೀಯ ಸಂಪರ್ಕಗಳ ಬಗ್ಗೆಯೂ ಸಮಗ್ರ ತನಿಖೆ ನಡೆಯಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಭ್ರಷ್ಟಾಚಾರದ ವಿರುದ್ಧ ಹೋರಾಟ ಮಾಡುವುದಾಗಿ ಹೇಳಿಕೊಳ್ಳುವ ಬಿಜೆಪಿ ನಾಯಕರು ಈ ಪ್ರಕರಣದ ಬಗ್ಗೆಯೂ ತಮ್ಮ ನಿಲುವು ಸ್ಪಷ್ಟಪಡಿಸಬೇಕು. ಆರೋಪಿಗಳ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹಿಸಿ ಬೀದರ್‌ನಿಂದ ಬೆಂಗಳೂರಿನವರೆಗೆ ಬಿಜೆಪಿ ಪಾದಯಾತ್ರೆ ನಡೆಸಲಿ ಎಂದು ಅವರು ಸವಾಲು ಹಾಕಿದ್ದಾರೆ.

ಪ್ರಮುಖ ಆರೋಪಿ ಬಸವರಾಜ ಕನ್ನಾಳೆ ಬೀದರ್ ಜಿಲ್ಲೆಯ ಬಿಜೆಪಿ ಕಾರ್ಯಕರ್ತರಾಗಿರುವ ಹಿನ್ನೆಲೆಯಲ್ಲಿ, ಆ ಜಿಲ್ಲೆಯ ಇತರೆ ಸಂಬಂಧಿತ ಬಿಜೆಪಿ ನಾಯಕರ ಪಾತ್ರವಿದೆಯೇ ಎಂಬುದನ್ನೂ ತನಿಖೆಗೆ ಒಳಪಡಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಪ್ರಕರಣದಲ್ಲಿ ಭಾಗಿಯಾದ ಎಲ್ಲ ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು, ಅಕ್ರಮವಾಗಿ ಗಳಿಸಿದ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಬೇಕು, ಹಗರಣದ ಹಿಂದೆ ಇರುವ ರಾಜಕೀಯ ಪ್ರಭಾವಿಗಳನ್ನು ಪತ್ತೆಹಚ್ಚಿ ಕ್ರಮ ಜರುಗಿಸಬೇಕು ಹಾಗೂ ವಿವಾದಿತ ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ರದ್ದುಪಡಿಸಬೇಕು ಎಂದು ಡಾ. ರಝಾಕ ಉಸ್ತಾದ ಒತ್ತಾಯಿಸಿದ್ದಾರೆ.

## ರಾಷ್ಟ್ರೀಯ ಯುವ ಶಿಬಿರದಲ್ಲಿ ಪರಿಸರ ಪ್ರೇಮ ಮೆರೆದ ರಾಯಚೂರು ಮಹಿಳಾ ಕಾಲೇಜಿನ ಎನ್‌ಎಸ್‌ಎಸ್ ತಂಡ



ರಾಯಚೂರು: ಕರ್ನಾಟಕ ಗಾಂಧೀ ಸ್ಮಾರಕ ನಿಧಿ ಬೆಂಗಳೂರು, ರಾಷ್ಟ್ರೀಯ ಸೇವಾ ಯೋಜನೆ ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕರ್ನಾಟಕ ಸರ್ಕಾರ ಹಾಗೂ ಮಹಾತ್ಮ ಗಾಂಧೀ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯ ಗದಗ ಇವರ ಸಂಯುಕ್ತಾಶ್ರಯದಲ್ಲಿ ನಡೆದ ಏಳು ದಿನಗಳ ಮಹಾತ್ಮ ಗಾಂಧೀಜಿಯವರ ಮೌಲ್ಯಗಳಾಧಾರಿತ ರಾಷ್ಟ್ರೀಯ ಯುವ ಶಿಬಿರದಲ್ಲಿ ರಾಯಚೂರಿನ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ತಂಡ ಸಕ್ರಿಯವಾಗಿ ಪಾಲ್ಗೊಂಡಿತು.

ಶಿಬಿರದ ಕಾರ್ಯಚಟುವಟಿಕೆಗಳ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಸ್ವಚ್ಛತಾ ಶ್ರಮದಾನ ಹಾಗೂ ಸಸಿ ನೆಡುವ ಕಾರ್ಯಕ್ರಮದಲ್ಲಿ ಕಾಲೇಜಿನ ಎನ್‌ಎಸ್‌ಎಸ್ ಸ್ವಯಂಸೇವಕಿಯರು ಅತ್ಯುತ್ಸಾಹದಿಂದ ಭಾಗವಹಿಸಿ, ಹೆಚ್ಚಿನ ಸಂಖ್ಯೆಯಲ್ಲಿ ಸಸಿಗಳನ್ನು ನೆಡುವ ಮೂಲಕ ತಮ್ಮ ಪರಿಸರ ಪ್ರೇಮವನ್ನು ಮೆರೆದರು. ತಂಡದ ಕಾರ್ಯೋತ್ಸಾಹ ಹಾಗೂ ಪರಿಸರ ಕಾಳಜಿ ಶಿಬಿರದಲ್ಲಿ ಭಾಗವಹಿಸಿದ್ದ ಗಣ್ಯರ ಪ್ರಶಂಸೆಗೆ ಪಾತ್ರವಾಯಿತು.

ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮ ಅಧಿಕಾರಿ ಡಾ. ಸಂತೋಷಕುಮಾರ ರೇವೂರ ಅವರ ನೇತೃತ್ವದಲ್ಲಿ ಎನ್‌ಎಸ್‌ಎಸ್ ತಂಡವು ಸ್ವಚ್ಛತಾ ಶ್ರಮದಾನ ಮತ್ತು ಸಸಿ ನೆಡುವ ಕಾರ್ಯವನ್ನು ಶ್ರದ್ಧೆಯಿಂದ ನಿರ್ವಹಿಸಿತು. ಸ್ವಯಂಸೇವಕಿಯರು ಪರಿಸರ ಸಂರಕ್ಷಣೆ, ಸ್ವಚ್ಛತೆ ಹಾಗೂ ಸಾಮಾಜಿಕ ಹೊಣೆಗಾರಿಕೆಯ ಸಂದೇಶವನ್ನು ತಮ್ಮ ಕಾರ್ಯದ ಮೂಲಕ ಸಾರಿದರು.

ಮಹಾತ್ಮ ಗಾಂಧೀ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಡಾ. ಸುರೇಶ್ ವಿ. ನಾಡಗೌರ್ಡ, ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಪ್ರಮುಖ ಅಂಗವಾದ ಯು.ಆರ್. ರಾವ್ ಉಪಗ್ರಹ ಕೇಂದ್ರದ ಉಪ ನಿರ್ದೇಶಕ ಹಾಗೂ ಚಂದ್ರಯಾನ ಮಿಷನ್ ಯಶಸ್ಸಿಗೆ ಪ್ರಮುಖ ಕೊಡುಗೆ ನೀಡಿರುವ ಬಾಹ್ಯಾಕಾಶ ವಿಜ್ಞಾನಿ ಡಾ. ರಾಮನಗೌಡ ವಿ. ನಾಡಗೌಡ, ವಿಶ್ವವಿದ್ಯಾನಿಲಯದ ಕುಲಸಚಿವ ಡಾ. ಅಮರೇಶ ಯಾತಗಲ್ ಸೇರಿದಂತೆ ಗಣ್ಯರು ಎನ್‌ಎಸ್‌ಎಸ್ ತಂಡದೊಂದಿಗೆ ಸಸಿ ನೆಡುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಸ್ವಯಂಸೇವಕಿಯರನ್ನು ಪ್ರೋತ್ಸಾಹಿಸಿದರು.

ರಾಷ್ಟ್ರೀಯ ಯುವ ಶಿಬಿರದಲ್ಲಿ ಗಾಂಧೀಜಿಯವರ ಮೌಲ್ಯಗಳಾದ ಸ್ವಚ್ಛತೆ, ಸೇವೆ, ಶ್ರಮದಾನ, ಪರಿಸರ ಸಂರಕ್ಷಣೆ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಪ್ರಾಯೋಗಿಕ ಚಟುವಟಿಕೆಗಳ ಮೂಲಕ ಯುವಜನರಲ್ಲಿ ಬೆಳೆಸುವ ಉದ್ದೇಶದಿಂದ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಇದರಲ್ಲಿ ರಾಯಚೂರು ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಎನ್‌ಎಸ್‌ಎಸ್ ತಂಡದ ಸಕ್ರಿಯ ಭಾಗವಹಿಸುವಿಕೆ ಗಮನ ಸೆಳೆಯಿತು.

## ಶ್ರೀ ಹುಚ್ಚಬುಡ್ಡೇಶ್ವರ ಜಾತ್ರಾ ಮಹೋತ್ಸವದಲ್ಲಿ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಭಾಗಿ



ಮಾನ್ವಿ: ತಾಲೂಕಿನ ಪೋತ್ನಾಳ ಗ್ರಾಮದಲ್ಲಿ ನಡೆದ ಶ್ರೀ ಹುಚ್ಚಬುಡ್ಡೇಶ್ವರ ಜಾತ್ರಾ ಮಹೋತ್ಸವದಲ್ಲಿ ಮಾನ್ವಿ ವಿಧಾನಸಭಾ ಕ್ಷೇತ್ರದ ನಿಕಟಪೂರ್ವ ಶಾಸಕ ರಾಜಾ ವೆಂಕಟಪ್ಪ ನಾಯಕ ದೊರೆ ಅವರು ಭಾಗವಹಿಸಿ, ಶ್ರೀ ಹುಚ್ಚಬುಡ್ಡೇಶ್ವರ ಸ್ವಾಮಿಗಳ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಜಾತ್ರಾ ಮಹೋತ್ಸವದ ಅಂಗವಾಗಿ ಅದ್ದೂರಿಯಾಗಿ ನಡೆದ ಶ್ರೀ ಹುಚ್ಚಬುಡ್ಡೇಶ್ವರ ಸ್ವಾಮಿಗಳ ರಥೋತ್ಸವದಲ್ಲಿ ಪಾಲ್ಗೊಂಡ ಅವರು, ಭಕ್ತರು ಹಾಗೂ ಗ್ರಾಮಸ್ಥರೊಂದಿಗೆ ರಥೋತ್ಸವದ ಸಂಭ್ರಮವನ್ನು ಹಂಚಿಕೊಂಡರು.

ರಥೋತ್ಸವದ ವೇಳೆ ಪೋತ್ನಾಳ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ್ದ ಅಪಾರ ಸಂಖ್ಯೆಯ ಭಕ್ತರು ಭಕ್ತಿಭಾವದಿಂದ ಸ್ವಾಮಿಯ ದರ್ಶನ ಪಡೆದು ರಥೋತ್ಸವವನ್ನು ಕಣ್ತುಂಬಿಕೊಂಡರು.

ಜಾತ್ರಾ ಮಹೋತ್ಸವದ ಅಂಗವಾಗಿ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳು ಹಾಗೂ ಸಾಂಪ್ರದಾಯಿಕ ಆಚರಣೆಗಳು ನೆರವೇರಿದವು. ಜಾತ್ರೆಯಿಂದಾಗಿ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರು, ಭಕ್ತರು, ಸಾರ್ವಜನಿಕರು ಹಾಗೂ ರಾಜಾ ವೆಂಕಟಪ್ಪ ನಾಯಕ ಅವರ ಅಭಿಮಾನಿಗಳು ಉಪಸ್ಥಿತರಿದ್ದರು.

## ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪದಾಧಿಕಾರಿಗಳ ಆಯ್ಕೆ



ಸಿರವಾರ: ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನೂತನ ಪದಾಧಿಕಾರಿಗಳ ಆಯ್ಕೆ ಕಾರ್ಯಕ್ರಮ ಮಂಗಳವಾರ ನಡೆಯಿತು.

ಸಂಘದ ಗೌರವಾಧ್ಯಕ್ಷರಾಗಿ ಜಿಎಲ್‌ಪಿಎಸ್ ಭಾಗ್ಯನಗರದ ಬಸವರಾಜ್ ಕೆ.ಎಸ್., ಕಾರ್ಯಾಧ್ಯಕ್ಷರಾಗಿ ಜಿಎಚ್‌ಪಿಎಸ್ ವಡವಟ್ಟದ ರಮೇಶ್ ಭಂಡಾರಿ, ಗೌರವ ಸಲಹೆಗಾರರಾಗಿ ಜಿಎಂಎಚ್ ಪಿಎಸ್ ಕನ್ಯಾ ಸಿರವಾರದ ರಾಜಸಾಬ್ ಅವರನ್ನು ಆಯ್ಕೆ ಮಾಡಲಾಯಿತು.

ಪುರುಷ ಉಪಾಧ್ಯಕ್ಷರಾಗಿ ಜಿಎಲ್‌ಪಿಎಸ್ ಕೃಷ್ಣನಗರ ಕಲ್ಲೂರಿನ ರಿಯಾಜ್, ಪುರುಷ ಸಹ ಕಾರ್ಯದರ್ಶಿಯಾಗಿ ಜಿಎಚ್‌ಪಿಎಸ್ ಶಾಖಾಪುರದ ಬಲವಂತ ಮಹೇಂದ್ರಕರ್, ಮಹಿಳಾ ಸಹ ಕಾರ್ಯದರ್ಶಿಯಾಗಿ ಜಿಎಚ್‌ಪಿಎಸ್ ಚಿಂಚರಕಿಯ ಜುಬೇದ ಬೇಗಂ ಅವರನ್ನು ಆಯ್ಕೆ ಮಾಡಲಾಯಿತು.

ಸಂಘಟನಾ ಕಾರ್ಯದರ್ಶಿಗಳಾಗಿ ಜಿಎಚ್‌ಪಿಎಸ್ ಕವಿತಾಳದ ಅಯ್ಯನಗೌಡ ಹಾಗೂ ಜಿಎಲ್‌ಪಿಎಸ್ ಭಾಗ್ಯನಗರ ಕ್ಯಾಂಪ್‌ನ ಮಲ್ಲಮ್ಮ ಅವರನ್ನು ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಹೇಶ್, ಪ್ರಧಾನ ಕಾರ್ಯದರ್ಶಿ ಬಸವರಾಜ್, ಮುಖ್ಯ ಗುರುಗಳ ಸಂಘದ ಅಧ್ಯಕ್ಷ ಮಲ್ಲಪ್ಪ, ಜಂಬಲದಿನ್ನಿ ಶಾಲೆಯ ಮುಖ್ಯ ಗುರು ರಾಮನಗೌಡ, ಅತ್ತನೂರು ಶಾಲೆಯ ಮುಖ್ಯ ಗುರು ಗೋಪಾಲ್ ರಾವ್, ನವಲಕಲ್ ಶಾಲೆಯ ಹಿರಿಯ ಮುಖ್ಯ ಗುರು ಅಯ್ಯನಗೌಡ, ಕಡದಿನ್ನಿ ಶಾಲೆಯ ಮುಖ್ಯ ಗುರು ಮಲ್ಲಪ್ಪ, ಎನ್‌ಜಿಒ ನಿರ್ದೇಶಕ ಚೆನ್ನವೀರಯ್ಯ ಹಾಗೂ ಶಿಕ್ಷಕರಾದ ಖೇಮಣ್ಣ, ಹುಲ್ಲಪ್ಪ ಗದ್ದಿ, ಪ್ರದೀಪ್ ಎಂ.ಎಚ್., ಗಣಪತಿ ರಾಠೋಡ್, ಗುಂಡಪ್ಪ, ಅರುಣ್ ಕುಮಾರ್ ಸೇರಿದಂತೆ ಹಲವರು ಭಾಗವಹಿಸಿದ್ದರು.

## ವಿದೇಶದಲ್ಲಿ ಅಧ್ಯಯನ 2026: ಕೊಪ್ಪಳ ಜಿಲ್ಲಾಧಿಕಾರಿಗಳಿಂದ ಪೋಸ್ಟರ್ ಬಿಡುಗಡೆ

ಕೊಪ್ಪಳ ಸೆಪ್ಟೆಂಬರ್ 01 (ಕರ್ನಾಟಕ ವಾರ್ತೆ): ರಾಜ್ಯದ ವಿದ್ಯಾರ್ಥಿಗಳಿಗೆ ಜಾಗತಿಕ ಉನ್ನತ ಶಿಕ್ಷಣದ ಅವಕಾಶಗಳನ್ನು ಕಲ್ಪಿಸುವ ಉದ್ದೇಶದಿಂದ ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯ ಅಭಿವೃದ್ಧಿ ನಿಗಮ ನಿಯಮಿತ (ಕೆವಿಟಿ ಎಸ್‌ಡಿಸಿ) ವತಿಯಿಂದ ಇದೇ ಸೆಪ್ಟೆಂಬರ್ 6 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ ವಿದೇಶದಲ್ಲಿ ಅಧ್ಯಯನ2026 ಕಾರ್ಯಕ್ರಮದ ಅಧಿಕೃತ ಪ್ರಚಾರ ಪೋಸ್ಟರ್ ಅನ್ನು ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಇಟ್ನಾಳ ಅವರು ಸೋಮವಾರ (ಆ. 31ರಂದು) ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಬಿಡುಗಡೆ ಮಾಡಿದರು.

ಪೋಸ್ಟರ್ ಬಿಡುಗಡೆಗೊಳಿಸಿದ ಬಳಿಕ ಜಿಲ್ಲಾಧಿಕಾರಿಗಳು ಮಾತನಾಡಿ, ವಿದೇಶದಲ್ಲಿ ಉನ್ನತ ವ್ಯಾಸಂಗ ಮಾಡುವ ಆಸಕ್ತಿಯಿರುವ ಕೊಪ್ಪಳ ಜಿಲ್ಲೆಯ ವಿದ್ಯಾರ್ಥಿಗಳಿಗೆ ಇದೊಂದು ಉತ್ತಮ ಅವಕಾಶವಾಗಿದೆ. ವಿದ್ಯಾರ್ಥಿಗಳಿಗೆ ಈ ಬಗ್ಗೆ ಸೂಕ್ತ ಮಾಹಿತಿ ನೀಡಿ, ನೋಂದಾಯಿಸುವಂತೆ ಅವರಿಗೆ ಪ್ರೇರೇಪಿಸಲು ಜಿಲ್ಲೆಯ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಪ್ರಾಚಾರ್ಯರು ಅಗತ್ಯ ಕ್ರಮವಹಿಸಬೇಕು. ವಿದೇಶದಲ್ಲಿ ಅಧ್ಯಯನ2026 ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಸುವ ಮೂಲಕ ಈ ಸುವರ್ಣಾವಕಾಶವನ್ನು ಸದುಪಯೋಗಪಡಿಸಿಕೊಳ್ಳಲು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಂಜುನಾಥ ಗುಂಡೂರು, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳಾದ ಮಂಜುನಾಥ ಜಿ. ಬೆಲ್ಲದ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಕೌಶಲ್ಯಾಭಿವೃದ್ಧಿ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

ಕಾರ್ಯಕ್ರಮದ ಪ್ರಮುಖ ವಿವರಗಳು: ವಿದೇಶದಲ್ಲಿ ಅಧ್ಯಯನ2026 ಕಾರ್ಯಕ್ರಮವು ಸೆಪ್ಟೆಂಬರ್ 06 ರಂದು ಬೆಳಿಗ್ಗೆ 9.30 ರಿಂದ ಸಂಜೆ 5.30 ರವರೆಗೆ ಗೇಟ್ ನಂ. 04, ಗಾಯತ್ರಿ ಗ್ರಾಂಡ್, ಗಾಯತ್ರಿ ವಿಹಾರ, ಅರಮನೆ ಮೈದಾನ, ಬೆಂಗಳೂರಿನಲ್ಲಿ ನಡೆಯಲಿದ್ದು, 10ಕ್ಕೂ ಹೆಚ್ಚು ವಿದೇಶಗಳ, 75ಕ್ಕೂ ಅಧಿಕ ಜಾಗತಿಕ ವಿಶ್ವವಿದ್ಯಾಲಯಗಳ ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ. ಉನ್ನತ ಶಿಕ್ಷಣದ ಅವಕಾಶಗಳು, ಪ್ರವೇಶ ಪ್ರಕ್ರಿಯೆ (Admissions), ವಿದ್ಯಾರ್ಥಿ ವೀಸಾ ಮಾರ್ಗದರ್ಶನ ಹಾಗೂ ಸ್ಕಾಲರ್‌ಶಿಪ್ (ವಿದ್ಯಾರ್ಥಿ ವೇತನ) ಕುರಿತ ಸಮಗ್ರ ಮಾಹಿತಿ ಒಂದೇ ಸೂರಿನಡಿ ಸಿಗಲಿದೆ. ವಿದೇಶಗಳಲ್ಲಿ ಉನ್ನತ ಶಿಕ್ಷಣ ವ್ಯಾಸಂಗ ಮಾಡಲಿಚ್ಛಿಸುವ ಅರ್ಹ ವಿದ್ಯಾರ್ಥಿಗಳು ಅಧಿಕೃತ ನೋಂದಣಿ ವೆಬ್ ಸೈಟ್: https://studyabroad.ksdckarnataka.com/ ಮೂಲಕ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K